ವಿಜಯಪುರ | ಸಂಪುಟ 02 | ಸಂಚಿಕೆ 27 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com | RNI NO: KARKAN/2023/86203 | ಶನಿವಾರ, ಮಾರ್ಚ್ 16, 2024



"ಮಂಡ್ಯ ಲೋಕಸಭಾ ಕ್ಷೇತ್ರದಿಂದ ಮತ್ತೆ ನಿಖಿಲ್ ಕುಮಾರಸ್ವಾಮಿ ಸ್ಪರ್ಧಿಸುವುದು ಬಹುತೇಕ ಖಚಿತವಾಗಿದ್ದು, ಅವರನ್ನು ಒಪ್ಪಿಸಲು ಮುಂದಾಗುವೆ. ಮಾ.25ಕ್ಕೆ ಜೆಡಿ-ಎಸ್-ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಅಧಿಕೃತವಾಗಿ ಘೋಷಣೆ ಮಾಡುವೆ."

– ಎಚ್ ಡಿ ಕುಮಾರಸ್ವಾಮಿ

ಮಾಜಿ ಮುಖ್ಯಮಂತ್ರಿಗಳು

ಉದಯರಶ್ಮಿ ಡೆಸ್ಕ್

### ಪೋಕ್ಸೋ ಕಾಯ್ದೆಯಡಿ ಎಫ್‌ಐಆರ್ ದಾಖಲು | ಸಂತ್ರಸ್ತೆಯ ತಾಯಿ ನೀಡಿದ್ದ ದೂರು | ಸಿಐಡಿಗೆ ವಹಿಸಿದ ರಾಜ್ಯ ಸರ್ಕಾರ

# ಬಿ.ಎಸ್.ಯಡಿಯೂರಪ್ಪ ವಿರುದ್ಧ ಲೈಂಗಿಕ ದೌರ್ಜನ್ಯ ಆರೋಪ!

**ಉದಯರಶ್ಮಿ ನ್ಯೂಸ್**

ಬೆಂಗಳೂರು: ಬಿಜೆಪಿ ಹಿರಿಯ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ವಿರುದ್ಧ ಪೋಕ್ಸೋ ಕಾಯ್ದೆಯಡಿ ದಾಖಲಾಗಿರುವ ಎಫ್‌ಐಆರ್ ಗೆ ಸಂಬಂಧಿಸಿ ತನಿಖೆಯ ಹೊಣೆಯನ್ನು ಸಿಐಡಿಗೆ ವರ್ಗಾಯಿಸಲು ರಾಜ್ಯ ಸರ್ಕಾರ ಮುಂದಾಗಿದೆ. ಘಟನೆ ಸಂಬಂಧ ತನಿಖೆ ನಡೆಸುವಂತೆ ಸೂಚನೆ ನೀಡಿದೆ.

ಹೌದು, ಯಡಿಯೂರಪ್ಪ ವಿರುದ್ಧ ಅಪ್ರಾಪ್ತ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದಡಿ ದೂರು ದಾಖಲಾಗಿತ್ತು. ಈ ಸಂಬಂಧ ಬೆಂಗಳೂರಿನ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಸಂತ್ರಸ್ತೆಯ ತಾಯಿ ನೀಡಿದ್ದ ದೂರಿನ ಅನ್ವಯ ಪೊಲೀಸರು ಎಫ್‌ಐಆರ್ ದಾಖಲಿಸಿದ್ದರು. ಇನ್ನು ಯಡಿಯೂರಪ್ಪ ವಿರುದ್ಧದ ಪ್ರಕರಣದ ತನಿಖೆಯನ್ನು ಸಿಐಡಿಗೆ ವರ್ಗಾಯಿಸುವುದಾಗಿ ಡಿಜಿ ಹಾಗೂ ಐಜಿಪಿ ಅಲೋಕ್ ಮೋಹನ್ ತಿಳಿಸಿದ್ದಾರೆ.



ಈ ಪ್ರಕರಣ ಸಂಬಂಧ ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಅವರು ಮಾತನಾಡಿ, ನ್ಯಾಯ ಕೊಡಿಸಿ ಎಂದು ತಾಯಿ-ಮಗಳು ಅನೇಕ ಸಲ ಮನೆಗೆ ಬಂದು ಹೋಗಿದ್ದರು. ಅನ್ಯಾಯ ಆಗಿದೆ ಎಂದು ನನ್ನ ಬಳಿ ಬಂದಿದ್ದರು. ನ್ಯಾಯ ಕೊಡಿಸಿ ಎಂದು ಮನವಿ ಮಾಡಿದ್ದರು. ನಾನು ಸ್ವಲ್ಪ ಹಣವನ್ನ ನೀಡಿದ್ದೆ. ಅದಾದ ಮೇಲೆ ನನ್ನ ವಿರುದ್ಧ ಏನೇನೋ ಮಾತನಾಡಿದರು. ಬಳಿಕ ಅವರನ್ನ ಕಮಿಷನರ್ ಬಳಿ ಕಳಿಸಿಕೊಟ್ಟೆ. ಈ ಪ್ರಕರಣ ರಾಜಕೀಯ ಪ್ರೇರಿತ ಅಲ್ಲ. ಇದನ್ನು ಕಾನೂನು ರೀತಿಯಲ್ಲಿ ಎದುರಿಸುತ್ತೇನೆ ಎಂದು ಮಾಜಿ ಸಿಎಂ ಯಡಿಯೂರಪ್ಪ ಹೇಳಿದ್ದಾರೆ.

## ಇಂದು ಲೋಕಸಭೆ ಚುನಾವಣೆ ದಿನಾಂಕ ಘೋಷಣೆ



**ಉದಯರಶ್ಮಿ ನ್ಯೂಸ್**

ನವದೆಹಲಿ: ಚುನಾವಣೆಗೆ ತಯಾರಾಗಿರುವ ದೇಶದಲ್ಲಿ ಯಾವಾಗ ಚುನಾವಣೆ ಎಂದು ಜನ ಕಾಯುತ್ತಿದ್ದರು. ಜನರ ನಿರೀಕ್ಷೆಗೆ ಉತ್ತರಿಸಿರುವ ಚುನಾವಣಾ ಆಯೋಗ ಕೊನೆಗೆ ಒಂದು ದಿನವನ್ನು ತಿಳಿಸಿದೆ. 2024ರ ಲೋಕಸಭೆ ಚುನಾವಣೆಯ ದಿನಾಂಕವನ್ನು ಶನಿವಾರ ಮಧ್ಯಾಹ್ನ 3 ಗಂಟೆಗೆ ಪ್ರಕಟಿಸಲಾಗುವುದು ಎಂದು ಭಾರತೀಯ ಚುನಾವಣಾ ಆಯೋಗ ಮಾರ್ಚ್ 15ರ ಮಧ್ಯಾಹ್ನ ತಿಳಿಸಿದೆ.

ಭಾರತೀಯ ಚುನಾವಣಾ ಆಯೋಗ ತನ್ನ ಅಧಿಕೃತ ಟ್ವಿಟ್ಟರ್‌ನಲ್ಲಿ ಲೋಕಸಭಾ ಚುನಾವಣೆ ಕುರಿತು ಸಂಕ್ಷಿಪ್ತ ಹೇಳಿಕೆಯನ್ನು ಪೋಸ್ಟ್ ಮಾಡಿದೆ. ಜೊತೆಗೆ ನಾಲ್ಕು ವಿಧಾನಸಭಾ ಚುನಾವಣೆಗಳ ದಿನಾಂಕಗಳನ್ನು ಅದೇ ಸಮಯದಲ್ಲಿ ಘೋಷಿಸುವುದಾಗಿ ತಿಳಿಸಿದೆ.

ಸಾರ್ವತ್ರಿಕ ಚುನಾವಣೆಗಳು 2024 ಮತ್ತು ಕೆಲವು ರಾಜ್ಯಗಳ ಅಸೆಂಬ್ಲಿಗಳ ವೇಳಾಪಟ್ಟಿಯನ್ನು ಪ್ರಕಟಿಸಲು ಚುನಾವಣಾ ಆಯೋಗದ ಪತ್ರಿಕಾಗೋಷ್ಠಿ ಮಾರ್ಚ್ 16 ರ ಶನಿವಾರ ನಡೆಯಲಿದೆ. ಇದು ಚುನಾವಣಾ ಆಯೋಗದ ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್‌ಗಳಲ್ಲಿ ಲೈವ್‌ಸ್ಟ್ರೀಮ್ ಆಗುತ್ತದೆ" ಎಂದು ಟ್ವೀಟ್ ಮಾಡಲಾಗಿದೆ.

## ರಾಜ ನುಡಿ

ಮೌನವು ಮಾತನ್ನು ಮೀರಿ ಮುಂದೆ ಹೋಗಬಲ್ಲುದು. ಹೀಗಾಗಿಯೇ ಇರಬೇಕು, ಪ್ರೀತಿಪಾತ್ರರಿಗೆ ನಿಮ್ಮ ಮೌನ ಬೇಗ ತಲುಪುತ್ತದೆ. ಅಪಾತ್ರರಿಗೆ ಮಾತು ಬೇಗ ತಲುಪುತ್ತದೆ.

-ಡಾ. ರಾಜಶೇಖರ ನಾಗೂರ

### ಶಿವಮೊಗ್ಗ ಲೋಕಸಭೆ ಕ್ಷೇತ್ರದಿಂದ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡುವುದಾಗಿ ಘೋಷಣೆ

# ಈಶ್ವರಪ್ಪ ಬಂಡಾಯ! :ಪಕ್ಷೇತರ ಸ್ಪರ್ಧೆಗೆ ನಿರ್ಧಾರ

**ಉದಯರಶ್ಮಿ ನ್ಯೂಸ್**

ಶಿವಮೊಗ್ಗ: ಕಳೆದ ವಿಧಾನಸಭೆ ಚುನಾವಣೆಯಲ್ಲಿ ಟಿಕೆಟ್ ಸಿಗದೆ ಅಸಮಾಧಾನಗೊಂಡಿದ್ದ ಮಾಜಿ ಸಚಿವ ಕೆಎಸ್ ಈಶ್ವರಪ್ಪ ಅವರು ಇದೀಗ ಲೋಕಸಭೆ ಚುನಾವಣೆಯಲ್ಲೂ ತಮ್ಮ ಪುತ್ರನಿಗೆ ಟಿಕೆಟ್ ಸಿಗದ್ದಿದ್ದಕ್ಕೆ ಬಿಜೆಪಿ ವಿರುದ್ಧ ತೀವ್ರ ಆಕ್ರೋಶಗೊಂಡಿದ್ದಾರೆ. ಅಲ್ಲದೆ ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಶಿವಮೊಗ್ಗ ಕ್ಷೇತ್ರದಿಂದ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡುವುದಾಗಿ ಘೋಷಿಸಿದ್ದಾರೆ.



ಪುತ್ರ ಕಾಂತೇಶ್ ಗೆ ಹಾವೇರಿ ಲೋಕಸಭೆ ಕ್ಷೇತ್ರದ ಟಿಕೆಟ್ ಕೈ ತಪ್ಪಿದ ಹಿನ್ನಲೆಯಲ್ಲಿ ಪುತ್ರನ ರಾಜಕೀಯ ಭವಿಷ್ಯದ ದೃಷ್ಟಿಯಿಂದ ಈಶ್ವರಪ್ಪ ಇದೀಗ ಅಖಾಡಕ್ಕಿಳಿದಿದ್ದಾರೆ. ಶುಕ್ರವಾರ ಬೆಂಬಲಿಗರು, ಹಿತೈಷಿಗಳು, ಅಭಿಮಾನಿಗಳೊಂದಿಗೆ ನಗರದ ಬಂಜಾರ ಕನ್ವೆನ್ಷನ್ ಹಾಲ್ ನಲ್ಲಿ ಸಭೆ ನಡೆಸಿದ ಈಶ್ವರಪ್ಪ, ಲೋಕಸಭೆ ಚುನಾವಣೆಯಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಶಿವಮೊಗ್ಗ ಕ್ಷೇತ್ರದಿಂದ ಸ್ಪರ್ಧಿಸುವುದಾಗಿ ತಿಳಿಸಿದ್ದಾರೆ.

ನಾನು ಸ್ವತಂತ್ರವಾಗಿ ಸ್ಪರ್ಧಿಸುತ್ತಿದ್ದೇನೆ ಹೊರತು ಮೋದಿ ಹಾಗೂ ಬಿಜೆಪಿ ವಿರುದ್ಧ ಹೋಗುತ್ತಿಲ್ಲ. ಬಿಜೆಪಿ ಪಕ್ಷ ಒಂದು ಕುಟುಂಬದ ಕೈಯಲ್ಲಿ ಸಿಲುಕಿದೆ. ಅದನ್ನು ತಪ್ಪಿಸಲು ಸ್ಪರ್ಧೆಗೆ ಮುಂದಾಗಿದ್ದೇನೆ ಎಂದು ಪರೋಕ್ಷವಾಗಿ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ವಿರುದ್ಧ ಗುಡುಗಿದ್ದಾರೆ.

ಇದೇ ವೇಳೆ ಮಾತನಾಡಿದ ಅವರು ಪ್ರಾಣ ಹೋದರೂ ನಾನು ನರೇಂದ್ರ ಮೋದಿ ವಿರುದ್ಧ ಹೋಗುವುದಿಲ್ಲ. ಮೋದಿ ಪ್ರಧಾನಿ ಆಗುವ ಮೊದಲು ಎಲ್ಲಾ ದೇಶಗಳು ಪಾಕಿಸ್ತಾನ ಜೊತೆಗಿದ್ದವು. ಆದರೆ, ಮೋದಿ ಪ್ರಧಾನಿ ಆದ ನಂತರ ಜಗತ್ತಿನ ಬಲಿಷ್ಠ ದೇಶಗಳು ಭಾರತದ ಜೊತೆಗಿವೆ. ಮುಸ್ಲಿಂ ರಾಷ್ಟ್ರಗಳು ಕೂಡ ಮೋದಿಗೆ ರತ್ನಗಂಬಳಿ ಹಾಕಿ ನಮ್ಮ ದೇಶಕ್ಕೆ ಬನ್ನಿ ಎಂದು ಮೋದಿಗೆ ದುಂಬಾಲು ಬೀಳುತ್ತಿವೆ ಎಂದರು

ಈ ನಿರ್ಧಾರ ಬಿಜೆಪಿ ವಿರುದ್ಧವಾಗಿದ್ದು, ಒಂದೇ ಕುಟುಂಬದವರ ಕಪಿಮುಷ್ಠಿಗೆ ಒಳಗಾಗಬಾರದು. ನಾನು ಬಿಜೆಪಿಯ ಸಿದ್ಧಾಂತಕ್ಕಾಗಿ ಹೋರಾಡುತ್ತಿದ್ದೇನೆಯೇ ಹೊರತು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಅಲ್ಲ, ಮೋದಿಯವರ ಕಟ್ಟಾ ಅನುಯಾಯಿಯಾಗಿರುವ ನಾನು ಪಕ್ಷದಲ್ಲೇ ಇರುತ್ತೇನೆ ಎಂದು ಹೇಳಿದರು.



## ವಚನ ಚಿಂತನ 324

### ಅರಿವು ಮರವೆಗೊಳಗಾದ ಆತ್ಮನ ತಿಳಿ

*ಉದಕವೊಂದರಲ್ಲಿ ತಂದು,*
*ವರ್ಣ ಭೇದಕ್ಕೆ ಹಲವಾದ ತೆರನಂತೆ,*
*ಆತ್ಮ ನಾನೆಂಬುದ ಮರೆದು,*
*ಸರ್ವರಲ್ಲಿ ಬೆರಸುವ ಚಿತ್ತ ಒಂದೋ,*
*ಎರಡೋ ?*
*ನೆಲಜಲ ಒಂದಾದಡೆ, ಬೆಳೆವ ವೃಕ್ಷ ಹಲವಾದ ತೆರದಂತೆ, ಅರಿವು ಮರವೆಗೊಳಗಾದ ಆತ್ಮನ ತಿಳಿದಲ್ಲಿ, ಬೇರೊಂದೆಡೆಗೆ ತೆರಪಿಲ್ಲ, ಮನಸಂದಿತ್ತು ಮಾರೇಶ್ವರಾ.*
*– ಮನಸಂದ ಮಾರಿತಂದೆಯವರು*

ಈ ಜಗತ್ತಿನಲ್ಲಿರುವ ದುಃಖ ದುಮ್ಮಾನಗಳಿಗೆ ಮೂಲಕಾರಣವನ್ನು ಮನಸಂದ ಮಾರಿತಂದೆಯವರು ಈ ವಚನದಲ್ಲಿ ಕಂಡುಕೊಂಡಿದ್ದಾರೆ. ಆತ್ಮ ಮತ್ತು ಪರಮಾತ್ಮಗಳು ಬೇರೆ ಎಂಬ ಭಾವನೆಯಿಂದ ನೋಡುವವರಿಗೆ ಪ್ರತಿ ಜೀವಿ/ವ್ಯಕ್ತಿಯೂ ಬೇರೆಯಾಗಿ ಕಾಣುತ್ತವೆ. ಪರಿಣಾಮವಾಗಿ ಹೋಲಿಕೆ ಪ್ರಾರಂಭವಾಗುತ್ತದೆ. ಹೋಲಿಕೆಯು ವ್ಯಕ್ತಿಯಲ್ಲಿ ಖಿನ್ನತೆ ಅಥವಾ ಅಹಂಕಾರವನ್ನು ತುಂಬುತ್ತದೆ. ಇದು ದುಃಖಕ್ಕೆ ದಾರಿಯಾಗುತ್ತದೆ. ಆತ್ಮ ಮತ್ತು ಪರಮಾತ್ಮ ಒಂದೇ ಎಂದು ಅರಿತಾಗ ತಾನು ಇತರರಿಗಿಂತ ಭಿನ್ನ ಎನ್ನುವ ಭಾವನೆ ಕಡಿಮೆಯಾಗುತ್ತದೆ. ಇತರರ ನೋವು ನಲಿವುಗಳು ತನ್ನ ನೋವು ನಲಿವು ಎಂಬ ಭಾವನೆ ಉಂಟಾಗುತ್ತದೆ ಇವರಿಗೆ ಸರ್ವವು ಸುಂದರವಾಗಿರುತ್ತದೆ. ಇಲ್ಲಿ ಆತ್ಮ (ಲಿಂಗ) ಮತ್ತು ಪರಮಾತ್ಮ (ಮಹಾಲಿಂಗ)ಗಳು ಒಂದೇ, ಆದರೆ ತೋರಿಕೆಯಲ್ಲಿ ಭಿನ್ನವಾಗಿರುತ್ತವೆ ಎನ್ನುವುದಕ್ಕೆ ಉತ್ತಮವಾದಂತಹ ಹೋಲಿಕೆಯನ್ನು ನೀಡಿದ್ದಾರೆ. ಒಬ್ಬ ಚಿತ್ರಕಾರನು ತನ್ನ ಚಿತ್ರರಚನೆಗೆ ವಿವಿಧ ಬಣ್ಣಗಳನ್ನು ಬಳಸುತ್ತಾನೆ. ಎಲ್ಲ ಬಣ್ಣಗಳ ತಯಾರಿಕೆಗೆ ಬಳಕೆಯಾಗುವ ಬಣ್ಣರಹಿತ ನೀರು ಒಂದೇ ಆದರೂ ವಿವಿಧ ಬಣ್ಣಗಳನ್ನು ತನ್ನೊಳಗೆ ಅಡಗಿಸಿಕೊಂಡು ವಿಭಿನ್ನ ರೂಪದಲ್ಲಿ ಗೋಚರಿಸುವಂತೆ. ಮಹಾಲಿಂಗವು ವಿವಿಧ ಜೀವಿಗಳಲ್ಲಿ ಪ್ರಾಣಲಿಂಗವಾಗಿ ಚೈತನ್ಯಸ್ವರೂಪದಲ್ಲಿದೆ. ನೆಲಜಲ ಒಂದಾದಾಗ ವಿವಿಧರೀತಿಯ ಸಸ್ಯಗಳು ಉಗಮ ವಾದರೂ ಅವುಗಳಿಗೆಲ್ಲ ಮೂಲವಾದ ಚೈತನ್ಯವು ಒಂದೇ ಎಂಬ ಅರಿವು ಆತ್ಮಜ್ಞಾನವನ್ನು ನೀಡುತ್ತದೆ. ಆತ್ಮನ ತಿಳಿದಲ್ಲಿ, ಬೇರೊಂದೆಡೆಗೆ ತೆರಪಿಲ್ಲ,

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಮಂಡ್ಯದಿಂದ ನಿಖಿಲ್ ಸ್ಪರ್ಧೆ: ಮಾ.25ಕ್ಕೆ ಘೋಷಣೆ



**ಉದಯರಶ್ಮಿ ನ್ಯೂಸ್**

ಮಂಡ್ಯ: ಮಂಡ್ಯ ಲೋಕಸಭಾ ಕ್ಷೇತ್ರದಿಂದ ಮತ್ತೆ ನಿಖಿಲ್ ಕುಮಾರಸ್ವಾಮಿ ಸ್ಪರ್ಧಿಸುವುದು ಬಹುತೇಕ ಖಚಿತವಾಗಿದ್ದು, ಮಾರ್ಚ್ 25ಕ್ಕೆ ಜೆಡಿಎಸ್-ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಅಧಿಕೃತವಾಗಿ ಘೋಷಣೆ ಮಾಡುವುದಾಗಿ ಮಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿ ಅವರು ಶುಕ್ರವಾರ ಹೇಳಿದ್ದಾರೆ.

ಮಂಡ್ಯದಲ್ಲಿ ನಡೆದ ಲೋಕಸಭಾ ಚುನಾವಣೆ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಎಚ್ ಡಿ ಕುಮಾರಸ್ವಾಮಿ, ನಿಮ್ಮ ಆಸೆಗೆ ನಾವು ಭಂಗ ತರುವುದಿಲ್ಲ. ಮತ್ತೆ ಲೋಕಸಭೆ ಚುನಾವಣೆಗೆ ಸ್ಪರ್ಧಿಸುವಂತೆ ನಿಖಿಲ್ ಕುಮಾರಸ್ವಾಮಿಯನ್ನು ಒಪ್ಪಿಸುತ್ತೇನೆ. ನಿಮ್ಮ ಭಾವನೆಗಳಿಗೆ ಯಾವುದೇ ಕಾರಣಕ್ಕೂ ಧಕ್ಕೆ ತರುವುದಿಲ್ಲ. ನಿಮ್ಮ ಆಸೆಯ ಪ್ರಕಾರ ಅದನ್ನು ನೇರವೇರಿಸಿಕೊಳ್ಳುತ್ತೇನೆ ಎಂದು ಭರವಸೆ ನೀಡಿದರು.

ಮಾರ್ಚ್ 21ಕ್ಕೆ ನನಗೆ ಅಪರೇಷನ್ ಇದೆ. ಮಾರ್ಚ್ 25ಕ್ಕೆ ಇಲ್ಲಿಗೆ ಬಂದು ನಾನು ಅಭ್ಯರ್ಥಿ ಹೆಸರನ್ನು ಘೋಷಣೆ ಮಾಡುತ್ತೇನೆ. ನಿಖಿಲ್ ಒಪ್ಪಿಸಲು ನಾನು ಮುಂದಾಗುತ್ತೇನೆ ಎಂದು ಕುಮಾರಸ್ವಾಮಿ ಹೇಳಿದರು.

ಈ ಬಾರಿ ಲೋಕಸಭೆ ಚುನಾವಣೆಗೆ ಬಿಜೆಪಿ, ಜೆಡಿಎಸ್ ಮೈತ್ರಿ ಮಾಡಿಕೊಂಡಿದ್ದು, ಮಂಡ್ಯ ಕ್ಷೇತ್ರವನ್ನ ಜೆಡಿಎಸ್ ಪಡೆದುಕೊಂಡಿದೆ. ಒಂದು ಕಾಲದಲ್ಲಿ ಜೆಡಿಎಸ್ ಭದ್ರಕೋಟೆಯಾಗಿರುವ ಮಂಡ್ಯಕ್ಕೆ ಕಾಂಗ್ರೆಸ್ ಎಂಟ್ರಿಕೊಟ್ಟಿದೆ. ವಿಧಾನಸಭೆಯಲ್ಲಿ ಕಾಂಗ್ರೆಸ್ 6 ಕ್ಷೇತ್ರದಲ್ಲಿ ಗೆಲುವುಸಾಧಿಸಿ ಪ್ರಾಬಲ್ಯ ಮೆರೆದಿದ್ದು, ಲೋಕಸಭೆ ಚುನಾವಣೆಯಲ್ಲೂ ಗೆಲುವು ಪಡೆಯುವ ಉತ್ಸಾಹದಲ್ಲಿದೆ. ಆದರೆ ಜೆಡಿಎಸ್ ಮಂಡ್ಯವನ್ನು ಮತ್ತೆ ತಮ್ಮ ತೆಕ್ಕೆಗೆ ಪಡೆಯಲು ಶತಾಯಗತಾಯ ಪ್ರಯತ್ನ ನಡೆಸುತ್ತಿದೆ. ಅದಕ್ಕಾಗಿಯೇ ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಕುಮಾರಸ್ವಾಮಿ ಅಥವಾ ನಿಖಿಲ್ ಕುಮಾರಸ್ವಾಮಿಯವರನ್ನು ಸ್ಪರ್ಧಿಸುವಂತೆ ಕಾರ್ಯಕರ್ತರು ಹಾಗೂ ಸ್ಥಳೀಯ ನಾಯಕರು ಮನವಿ ಮಾಡುತ್ತಿದ್ದಾರೆ.

ನಿಖಿಲ್ ಕುಮಾರಸ್ವಾಮಿ ಈ ಹಿಂದೆ ನಾನು ಬಾರಿ ಲೋಕಸಭೆ ಚುನಾವಣೆಗೆ ಸ್ಪರ್ಧೆ ಮಾಡುವುದಿಲ್ಲ ಎಂದು ಹೇಳಿದ್ದರು. ಆದರೆ ಅಭಿಮಾನಿಗಳು, ನಾಯಕರು ನಿಖಿಲ್ ಸ್ಪರ್ಧೆಯ ಬಗ್ಗೆ ಒಲವು ವ್ಯಕ್ತಪಡಿಸುತ್ತಿರುವ ಕಾರಣ ಈಗ ಅವರ ನಿಲುವು ಏನು ಎನ್ನುವುದು ಸದ್ಯದ ಕುತೂಹಲವಾಗಿದೆ.

### ಇಂಗಳಗಿ ಕೆರೆಗೆ ನೀರು ಪೂರೈಸುವ ಕಾಲುವೆ ಒಡೆದ ಪ್ರದೇಶಕ್ಕೆ ರೈತರ ಭೇಟಿ | ಪ್ರತಿಭಟನೆ ಎಚ್ಚರಿಕೆ

# ಕಾಲುವೆ ಒಡೆದು ನೀರು ಪಡೆಯುತ್ತಿರುವ ಕ್ರಶರ್‌ಗಳು!

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಗ್ರಾಮೀಣ ಕೆರೆಗಳಿಗೆ ನೀರು ಪೂರೈಸುವ ಕಾಲುವೆ ಒಡೆದು, ಪಡಗಾನೂರ ಗ್ರಾಮ ವ್ಯಾಪ್ತಿಯಲ್ಲಿನ ಕಲ್ಲು ಕ್ರಶರ್‌ಗಳ ಮಾಲೀಕರು ಅನಧಿಕೃತವಾಗಿ ನೀರು ಪಡೆಯುತ್ತಿರುವ ಪ್ರದೇಶಕ್ಕೆ ಇಂಗಳಗಿ ಗ್ರಾಮದ ರೈತರು ತೆರಳಿ ಆಕ್ರೋಶ ವ್ಯಕ್ತಪಡಿಸಿದರು.

ತಾಲ್ಲೂಕಿನ ಇಂಗಳಗಿ ಗ್ರಾಮದ ರೈತರು ತಮ್ಮ ಕೆರೆಗೆ ನೀರು ಪೂರೈಸುವ ಕಾಲುವೆಗೆ ಗುರುವಾರ ತೆರಳಿ ವಾಸ್ತವಿಕ ಸ್ಥಿತಿ ನೋಡಿ ಕೃಷ್ಣಾ ಭಾಗ್ಯ ಜಲನಿಗಮದ ಅಧಿಕಾರಿಗೆ ಮಾಹಿತಿ ನೀಡಿ ವಾಗ್ವಾದ ನಡೆಸಿದರು. ಹಾಗೂ ತಾಲ್ಲೂಕು ಆಡಳಿತ ಹಾಗೂ ಜನಪ್ರತಿನಿಧಿಗಳ ವಿರುದ್ಧ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ರೈತರಾದ ಸಂತೋಷ ಬಿರಾದಾರ, ಮಂಜುನಾಥ ಕೊಕಟನೂರ ಮಾತನಾಡಿ, ಪಡಗಾನೂರ ಗ್ರಾಮದ ಪ್ರಭಾವಿ ನಾಯಕರು ಸೇರಿದಂತೆ ವಿವಿಧ ಕ್ರಶರ್‌ಗಳು ಅಕ್ರಮವಾಗಿ ನೀರು ಪಡೆಯುತ್ತಿವೆ. ಇದನ್ನು ಕೃಷ್ಣಾ ಭಾಗ್ಯ ಜಲ ನಿಗಮದ ಅಧಿಕಾರಿಗಳು ನೋಡಿದ್ದರು ಸಹ ಜಾಣ ಕುರುಡರಂತೆ ವರ್ತಿಸುತ್ತಿದ್ದಾರೆ. ಈ ಕುರಿತು ಪ್ರಶ್ನಿಸಿದರೆ ಅಧಿಕಾರಿ ರೈತರೊಂದಿಗೆ ಬೇಕಾಬಿಟ್ಟಿಯಾಗಿ ಮಾತನಾಡುತ್ತಾರೆ. ಜನ, ಜಾನುವಾರಗಳಿಗೆ ಕುಡಿಯುವ ನೀರು ಅಗತ್ಯವಾದ ಹಿನ್ನಲೆಯಲ್ಲಿ ಕೆರೆಗಳಿಗೆ ನೀರು ಪೂರೈಸಲಾಗುತ್ತಿದೆ. ಯಾವುದೇ ರೈತರು ಅನಗತ್ಯವಾಗಿ ನೀರು ಪಡೆದರೆ ಅವರ ಮೇಲೆ ಕಾನೂನು





ಕ್ರಮ ಜರುಗಿಸಲಾಗುವುದು ಎಂದು ಸ್ವತಃ ಜಿಲ್ಲಾ ಉಸ್ತುವಾರಿ ಸಚಿವರೇ ಎಚ್ಚರಿಕೆ ನೀಡಿದ್ದಾರೆ. ಈಗ ನೋಡಿದರೆ ಅವರದೇ ಪಕ್ಷದ ನಾಯಕರು ಹಾಗೂ ಕಲ್ಲು ಕ್ರಶರ್ ಮಾಲೀಕರು ತಮ್ಮ ಕಲ್ಲುಗಣಿಗಳನ್ನು ತುಂಬಿಸಿರುತ್ತಾರೆ. ಇವರ ಮೇಲೆ ಯಾವುದೇ ಕಾನೂನುಕ್ರಮ ಇಲ್ಲವೇ ಹೇಗೆ? ಸಾಮಾನ್ಯರಿಗೊಂದು ನ್ಯಾಯ, ಇವರಿಗೊಂದು ನ್ಯಾಯವೇ ಹೇಗೆ? ಈ ಕುರಿತು ಆಧುನಿಕ ಭಗೀರಥರಾದ ಸಚಿವರೇ ಕ್ರಮವಹಿಸಲು ಮುಂದಾಗಬೇಕು ಎಂದರು.

ಜಿಲ್ಲಾ ಆಡಳಿತ ಕಾಲುವೆ ಮೂಲಕ ಕ್ರಶರ್‌ಗಳು ನೀರು ಪಡೆಯುವದನ್ನು ತಡೆಯಬೇಕು. ಕ್ರಶನ್ ಮಾಲೀಕರಿಗೆ ಈ ಕುರಿತು ನೋಟಿಸ್ ನೀಡಬೇಕು. ಜನತೆ ಹಾಗೂ ರೈತರ ಹಿತ ಕಾಯದೇ ಬೇಕಾಬಿಟ್ಟಿಯಾಗಿ ಕಾಲುವೆ ಒಡೆದು ನೀರು ಪಡೆಯುವವರ ಮೇಲೆ ಕಾನೂನು ಕ್ರಮ ವಹಿಸಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಉಗ್ರ ಪ್ರತಿಭಟನೆಗೆ ಮುಂದಾಗುವುದು ಅನಿವಾರ್ಯ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ರೈತರಾದ ಅರುಣ ಹುಗ್ಗಿ, ಸಿದ್ದಪ್ಪ ತಳವಾರ, ಸಂಗು ಪೂಜಾರಿ, ಸಂತೋಷ ಇಂಡಿ ಶಂಕರಗೌಡ ಬಿರಾದಾರ, ಶಿವು ಕೋಣ್ಣೂರ, ಸಂಜೀವ ಗೊಡ್ಯಾಳ, ಮಂಜುನಾಥ ಚೌಧರಿ ಇದ್ದರು.

### ದೇವರಹಿಪ್ಪರಗಿ: ಕಾಂಗ್ರೆಸ್ ಪಕ್ಷದ ಜಿಲ್ಲಾ ಉಪಾಧ್ಯಕ್ಷ ಸಂಗನಗೌಡ ಹರನಾಳ ಆರೋಪ

# ಶಾಸಕ ರಾಜುಗೌಡರಿಂದ ಯೋಜನೆಗಳಲ್ಲಿ ಅನಗತ್ಯ ಹಸ್ತಕ್ಷೇಪ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಅನುದಾನ, ಯೋಜನೆಗಳ ಕುರಿತು ಸ್ಪಷ್ಟ ಮಾಹಿತಿ ನೀಡದೇ, ಎಲ್ಲವುಗಳಿಗೆ ನಾನೇ ಕಾರಣ ಎಂಬ ಹೇಳಿಕೆ ನೀಡಿ ಶಾಸಕರು ಸಣ್ಣತನ ತೋರುತ್ತಿದ್ದಾರೆ ಇದು ಶಾಸಕ ಸ್ಥಾನಕ್ಕೆ ಶೋಭೆ ತರುವಂಥದ್ದಲ್ಲ ಎಂದು ಕಾಂಗ್ರೆಸ್ ಪಕ್ಷದ ಜಿಲ್ಲಾ ಉಪಾಧ್ಯಕ್ಷ ಸಂಗನಗೌಡ ಹರನಾಳ ಗಂಭೀರವಾಗಿ ಆರೋಪಿಸಿದ್ದಾರೆ.

ಶುಕ್ರವಾರ ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ಕಾಂಗ್ರೆಸ್ ಉಪಾಧ್ಯಕ್ಷರು, ಜಿಲ್ಲೆಯ ಉಸ್ತುವಾರಿ ಸಚಿವರ ಸಹಕಾರ ಹಾಗೂ ಆಸಕ್ತಿಯಿಂದ ಮತಕ್ಷೇತ್ರಕ್ಕೆ ಅಗತ್ಯವಾದ ಅನುದಾನ ತರುವಲ್ಲಿ ಮಾಜಿಶಾಸಕ ಶರಣಪ್ಪ ಸುಣಗಾರ ಸೇರಿದಂತೆ ಕಾಂಗ್ರೆಸ್ ಪಕ್ಷದ ಪ್ರಮುಖ ನಾಯಕರು ಸಾಕಷ್ಟು ಶ್ರಮವಹಿಸುತ್ತಿದ್ದಾರೆ.



ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ತಾಲ್ಲೂಕು ಕೇಂದ್ರಕ್ಕೆ ಅಗತ್ಯವಾದ ಕಚೇರಿಗಳ ಆರಂಭಕ್ಕೆ ಸರ್ಕಾರದ ನೆರವು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಸಹಕಾರದೊಂದಿಗೆ ಅಗತ್ಯ ಪ್ರಯತ್ನದಲ್ಲಿದೆ. ಆದರೆ ಕ್ಷೇತ್ರದ ಶಾಸಕರು ಮಾತ್ರ ಗ್ರಾಮ ಪಂಚಾಯಿತಿ ಮಟ್ಟದ ಸಭೆ ಹಾಗೂ ಯೋಜನೆಗಳಲ್ಲಿ ಅನಗತ್ಯ ಹಸ್ತಕ್ಷೇಪ ಕೈಗೊಳ್ಳುತ್ತಿದ್ದಾರೆ. ಅಲ್ಲದೆ ಹಿಂದಿನ ಶಾಸಕರ ಹಾಗೂ ಸರ್ಕಾರದ ಯೋಜನೆಗಳಿಗೆ ಹಿಂದೆಯೇ ಗುದ್ದಲಿಪೂಜೆ ನೆರವೇರಿಸಿದ್ದರೂ ಸಹ ಮತ್ತೊಮ್ಮೆ 'ಸನಿಕೆಪೂಜೆ' ಜರುಗಿಸುವ ಮೂಲಕ ಕ್ಷೇತ್ರದ ಜನತೆಗೆ ತಪ್ಪು ಮಾಹಿತಿ ನೀಡುತ್ತಿದ್ದಾರೆ.

ದೇವರಹಿಪ್ಪರಗಿ ಪಟ್ಟಣದ ಸರ್ಕಾರಿ ಕಾಲೇಜು, ಪಡಗಾನೂರ ರಸ್ತೆ ಹಾಗೂ ಕುಡಿಯುವ ನೀರಿನ ಜೆಜೆಎಮ್, ಭೂಸೇನಾ ನಿಗಮದ ಕಾರ್ಯಗಳಿಗೆ ಹಿಂದಿನ ಸರ್ಕಾರದಲ್ಲಿಯೇ ಅನುದಾನ ದೊರೆತು ಪೂಜೆ ಜರುಗಿಸಲಾಗಿದೆ. ಆದರೆ ಶಾಸಕರು ಈಗ ಪುನಃ ಯಾವ ಯೋಜನೆ, ಯಾವ ವರ್ಷ, ಯಾವ ಇಲಾಖೆಯಡಿ ಅನುಮೋದನೆ, ಯಾರು ಗುತ್ತಿಗೆದಾರರು? ಎಂಬ ಯಾವ ಮಾಹಿತಿಗಳನ್ನು ಒಳಗೊಂಡಿರದ ಬ್ಯಾನರ್‌ಗಳೊಂದಿಗೆ ಬಂದು ಸನಿಕೆಪೂಜೆ ಮಾಡುತ್ತಿದ್ದಾರೆ. ಅಲ್ಲದೇ ಈಗ ರಾಜ್ಯ ಸರ್ಕಾರ ನೀಡಿರುವ ಬಡವರ ಮನೆಗಳಿಗೂ ತಮ್ಮದೇ ಹೆಸರು ಹೇಳುತ್ತಿದ್ದಾರೆ. ಅಲ್ಲದೇ ಜಾತಿಯಾಧಾರಿತವಾಗಿ ತಾರತಮ್ಯ ನೀತಿ ಅನುಸರಿಸಿ ತಮಗೆ ಬೇಕಾದವರಿಗೆ ಮಾತ್ರ ಅನುಕೂಲ ಕಲ್ಪಿಸುತ್ತಿದ್ದಾರೆ. ಹಿಂದಿನ ಯಾವ ಶಾಸಕರು ಅಳವಡಿಸಿಕೊಳ್ಳದ ಇಬ್ಬಗೆಯ ನೀತಿ ಅವರ ಸ್ಥಾನಕ್ಕೆ ಯೋಗ್ಯವಾದುದಲ್ಲ. ಇದು ಅವರ ದ್ವೇಷಪೂರಿತ ರಾಜಕೀಯ ಹಾಗೂ ಸಣ್ಣತನಕ್ಕೆ ಸಾಕ್ಷಿಯಾಗಿದೆ ಎಂದು ಟೀಕಿಸಿದರು.

# ಬಿಎಲ್ಡಿಇ ವೈದ್ಯರು, ಎಂಜಿನೀಯರ್‌ಗೆ ಕೇಂದ್ರದಿಂದ ಪೇಟೆಂಟ್


ಉದಯರಶ್ಮಿ ನ್ಯೂಸ್

ವಿಜಯಪುರ: ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರ ಇಬ್ಬರು ವೈದ್ಯರು ಹಾಗೂ ಓರ್ವ ಎಂಜಿನೀಯರ್ ನಡೆಸಿದ ಸಂಶೋಧನೆಗೆ ಕೇಂದ್ರ ಸರಕಾರದಿಂದ ಪೇಟೆಂಟ್ ದೊರೆತಿದೆ.



ಡಾ. ಈಶ್ವರ ಬ. ಬಾಗೋಜಿ. ಕೆ. ಸಿ. ಮೊಹಾಂತಿ. ಡಾ. ಗಿರೀಶ ಖೋದ್ನಾಪೂರ

ಆಸ್ಪತ್ರೆಯ ಜಿಲ್ಲಾ ವಿಕಲಚೇತನ ಮತ್ತು ಪುನರ್ವಸತಿ ಕೇಂದ್ರದ ನೋಡಲ್ ಅಧಿಕಾರಿ ಮತ್ತು ಅಂಗರಚನಾ ಶಾಸ್ತ್ರ ವಿಭಾಗದ ಡಾ. ಈಶ್ವರ ಬ. ಬಾಗೋಜಿ, ಎಂಜಿನೀಯರ್ ಕೆ. ಸಿ. ಮೊಹಂತಿ ಹಾಗೂ ಎಲಬು ಮತ್ತು ಕೀಲು ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಗಿರೀಶ ಖೋದ್ನಾಪೂರ ಅವರು ಜಂಟಿಯಾಗಿ ನಡೆಸಿ ಸಂಶೋಧನೆಗೆ ಪೇಟೆಂಟ್ ಲಭಿಸಿದೆ.



क्रम सं/SL No :044182872

पेटेंट कार्यालय,भारत सरकार | The Patent Office, Government Of India

पेटेंट प्रमाण पत्र | Patent Certificate

(पेटेंट नियमावली का नियम 74) | (Rule 74 of The Patents Rules)

| | | |
|---|---|---|
| पेटेंट सं. / Patent No. | : | 523417 |
| आवेदन सं. / Application No. | : | 202041038117 |
| फाइल करने की तारीख / Date of Filing | : | 03/09/2020 |
| पेटेंटी / Patentee | : | 1.Dr. ISHWAR B. BAGOJI 2.KANHU CHARAN MOHANTY 3.DR GIRISH KHODNAPUR |

प्रमाणित किया जाता है कि पेटेंटी को, उपरोक्त आवेदन में यथाप्रकटित *A NOVEL FOLDABLE ARTIFICIAL LEG* नामक आविष्कार के लिए, पेटेंट अधिनियम, 1970 के उपबंधों के अनुसार आज तारीख सितम्बर 2020 के तीसरे दिन से बीस वर्ष की अवधि के लिए पेटेंट अनुदत्त किया गया है।

It is hereby certified that a patent has been granted to the patentee for an invention entitled *A NOVEL FOLDABLE ARTIFICIAL LEG* as disclosed in the above mentioned application for the term of 20 years from the 3rd day of September 2020 in accordance with the provisions of the Patents Act,1970.

ಎ ನೊವೆಲ್ ಫ್ರೋಲ್ಡಬಲ್ ಆರ್ಟಿಫಿಸಿಯಲ್ ಲೆಗ್(A Novel Foldable Artificial Leg) ಸಂಶೋಧನೆ ನಡೆಸಿದ್ದರು. 2020 ರಲ್ಲಿ ನಡೆಸಿದ ಈ ಸಂಶೋಧನೆ ಕೃತಕ ಅಂಗಾಂಗ ವಿಭಾಗದಲ್ಲಿ ಲಾಕಿಂಗ್ ಮತ್ತು ಅನ್‌ಲಾಕಿಂ–ಗ್ ತಂತ್ರಜ್ಞಾನದಡಿ ಕರ್ನಾಟಕ ರಾಜ್ಯದಲ್ಲಿ ನಡೆಸಲಾದ ಪ್ರಥಮ ಸಂಶೋಧನೆ ಎಂಬ ಖ್ಯಾತಿಗೆ ಪಾತ್ರವಾಗಿದೆ.

ವೈದ್ಯರು ಮತ್ತು ಎಂಜಿನೀಯರ್ ಪಡೆದಿರುವ ಪೇಟೆಂಟ್‌ಗೆ ವಿಶ್ವವಿದ್ಯಾಲಯದ ಕುಲಾಧಿಪತಿಯು ಆಗಿರುವ ಸಚಿವ ಎಂ. ಬಿ. ಪಾಟೀಲ, ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ಉಪಕುಲಪತಿ ಡಾ. ಆರ್. ಎಸ್. ಮುಧೋಳ, ಪ್ರಿನ್ಸಿಪಾಲ್ ಡಾ. ಅರವಿಂದ ಪಾಟೀಲ ಮತ್ತು ರಜಿಸ್ಟ್ರಾರ್ ಡಾ. ರಾಘವೇಂದ್ರ ವಿ. ಕುಲಕರ್ಣಿ ಅಭಿನಂದನೆ ಸಲ್ಲಿಸಿದ್ದಾರೆ.

# ವರ್ಷಕ್ಕೊಮ್ಮೆಯಾದರೂ ಕಿಡ್ನಿ ತಪಾಸಣೆ ಮಾಡಿಸಿ :ಡಾ.ಪಾಟೀಲ

ಉದಯರಶ್ಮಿ ನ್ಯೂಸ್

ವಿಜಯಪುರ: ರೋಗಿಗಳು ವೈದ್ಯರ ಸಲಹೆಯಂತೆ ಔಷಧಿಗಳನ್ನು ತೆಗೆದುಕೊಂಡರೆ ಕಿಡ್ನಿಗೆ ಆಗುವ ಹಾನಿಯನ್ನು ತಪ್ಪಿಸಬಹುದು ಎಂದು ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆಯ ಮೂತ್ರಜನಕಾಂಗ ಶಸ್ತ್ರಚಿಕಿತ್ಸೆ ವಿಭಾಗದ ಮುಖ್ಯಸ್ಥ ಡಾ. ಎಸ್. ಬಿ. ಪಾಟೀಲ ಹೇಳಿದ್ದಾರೆ.

ಗುರುವಾರ ಆಸ್ಪತ್ರೆಯಲ್ಲಿ ಮೂತ್ರಜನಕಾಂಗ ರೋಗ ಹಾಗೂ ಮೂತ್ರಪಿಂಡ (ಕಿಡ್ನಿ) ಚಿಕಿತ್ಸಾ ವಿಭಾಗಗಳ ವತಿಯಿಂದ ಆಯೋಜಿಸಲಾಗಿದ್ದ ವಿಶ್ವ ಕಿಡ್ನಿ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಕಿಡ್ನಿ ಆರೋಗ್ಯ ಮುಖ್ಯವಾಗಿದೆ. ಹೀಗಾಗಿ ಸಾರ್ವಜನಿಕರು ವರ್ಷಕ್ಕೆ ಒಮ್ಮೆಯಾದರೂ ಕಿಡ್ನಿ ತಪಾಸಣೆ ಮಾಡಿಸಿಕೊಳ್ಳಬೇಕು. ಸಮಸ್ಯೆಗಳಿದ್ದರೆ ವೈದ್ಯರ ಸಲಹೆಯಂತೆ ಔಷಧಿ ಪಡೆದರೆ ಹಾನಿಯನ್ನು ತಪ್ಪಿಸಬಹುದು. ಶ್ರೀ ಬಿ.





ಎಂ. ಪಾಟೀಲ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆಯಲ್ಲಿ ಕರ್ನಾಟಕ ಸರಕಾರದ ಜೀವಸಾರ್ಥಕತೆ ಅಡಿಯಲ್ಲಿ ಕೆಡವ–ರಿಕ್ ಕಿಡ್ನಿ ಟ್ರಾನ್ಸಪ್ಲಾಂಟ್ ಮಾಡಲು ಮಾನ್ಯತೆಯನ್ನು ಪಡೆದಿದೆ. ಕಿಡ್ನಿ ಕಸಿಗೆ ಒಳಗಾಗಬೇಕಿರುವ ರೋಗಿಗಳ ಹೆಸರು ನೋಂದಣಿ ಮಾಡಿಕೊಳ್ಳಲು ಆಸ್ಪತ್ರೆಯ ಸಂಪರ್ಕಾಧಿಕಾರಿಯನ್ನು ಭೇಟಿ ಮಾಡಿ ವೈದ್ಯಕೀಯ ದಾಖಲಾತಿಗಳನ್ನು ಒದಗಿಸಬೇಕು.

ಆಯುಷ್ಮಾನ ಭಾರತ ಆರೋಗ್ಯ ಕರ್ನಾಟಕ ಯೋಜನೆ ಅಡಿಯಲ್ಲಿಯೂ ಕಿಡ್ನಿ ಕಸಿ ಮಾಡಲು ಆಸ್ಪತ್ರೆ ಮಾನ್ಯತೆ ಪಡೆದಿದೆ. ಈ ಯೋಜನೆಗಳ ಅಡಿಯಲ್ಲಿ ಕಿಡ್ನಿ ರೋಗಿಗಳಿಗೆ ಉಚಿತವಾಗಿ ಕಿಡ್ನಿ ಕಸಿ ಮಾಡಿಸಿಕೊಳ್ಳಬಹುದು ಎಂದು ಅವರು ತಿಳಿಸಿದರು.

ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ವಿಜಯಕುಮಾರ ಕಲ್ಯಾಣಪ್ಪಗೊಳ ಅವರು ಕಿಡ್ನಿಯ ಆರೈಕೆ ಮತ್ತು ಕಿಡ್ನಿ ಸುರಕ್ಷತೆಯ ಜಾಗೃತಿ ಅಗತ್ಯವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯ ವೈದ್ಯರಾದ ಡಾ. ವಿನಯ ಕುಂದರಗಿ, ಡಾ. ಸಂದೀಪ ಪಾಟೀಲ, ಡಾ. ಸಂತೋಷ ಪಾಟೀಲ, ಡಾ. ಮನೋಜ, ಡಾ. ವಿಕಾಸ, ಡಾ. ನವಾಜ, ಡಾ. ದ್ರುವ, ಡಾ. ಅನುಪಮು, ಡಾ. ಗುಲಶನ್, ಡಾ. ಸಿದ್ಧಾರ್ಥ, ಡಾ. ವೀರಪ್ಪ ಮುಂತಾದವರು ಉಪಸ್ಥಿತರಿದ್ದರು.

ಶಾಂತೇಶ ಸಲಗರೆ ವಂದಿಸಿದರು. ಚನ್ನಬಸವ ಕೊಟಗಿ ಮತ್ತು ದಶವಂತ ನಿರೂಪಿಸಿದರು.

# ಗ್ರಾಹಕರು ಜಾಗರೂಕತೆಯಿಂದ ವ್ಯವಹರಿಸಿ :ಕುಂದರ್

ಉದಯರಶ್ಮಿ ನ್ಯೂಸ್

ವಿಜಯಪುರ: ಈ ಕಾಮರ್ಸ್ ನಲ್ಲಿ ವ್ಯಾಪಾರ ವಹಿವಾಟು ಮಾಡುವ ಗ್ರಾಹಕರನ್ನು ಗು–ರಿಯಾಗಿಸಿಕೊಂಡು ಅಪರಿಚಿತ ವ್ಯಕ್ತಿಗಳು ಅವರ ಹಣವನ್ನು ಮೋಸದಿಂದ ಸೆಳೆಯುವ ಸಾಧ್ಯತೆ ಇದ್ದು ಗ್ರಾಹಕರು ತಮ್ಮ ವಹಿವಾಟಿನ ಸಮಯದಲ್ಲಿ ಅಪರಿಚಿತ ವ್ಯಕ್ತಿಗಳು ಕಳುಹಿಸಿದ ಸಂದೇಶಗಳನ್ನೂ ನಂಬಿ ಲಿಂಕ್ ಕ್ಲಿಕ್ ಅಥವಾ ವ್ಯಯಕ್ತಿಕ ಮಾಹಿತಿಗಳನ್ನು ನೀಡದೇ ಗ್ರಾಹಕರು ಜಾಗರೂಕತೆಯಿಂದ ವ್ಯವಹರಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯರಾಗಿರುವ ಹಿರಿಯ ಸಿವಿಲ್ ನ್ಯಾಯಾಧೀಶ ಸಂತೋಷ್ ಕುಂದರ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಆಹಾರ ಸುರಕ್ಷತಾ ಇಲಾಖೆ, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ಹಾಗೂ ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರ ನ್ಯೂ ಸಂಸ್ಥೆ ಇವರ ಸಹಯೋಗದಲ್ಲಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ನಡೆದ ವಿಶ್ವ ಗ್ರಾಹಕರ ದಿನಾಚರಣೆ ಪ್ರಯುಕ್ತ ಗ್ರಾಹಕರಿಗೆ ನ್ಯಾಯಯುತ ಮತ್ತು ಜವಾಬ್ದಾ–ರಿಯುತ ಕೃತಕ ಬುದ್ಧಿವಂತಿ–ಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಅನಾಮಧೇಯ ವ್ಯಕ್ತಿಗಳು ನಿಮ್ಮ ಮೊಬೈಲ್ ಗೆ ಸಂದೇಶ ಕಳಿಸಿ, ಹಣ ಹೂಡಿದರೆ ದ್ವಿಗುಣ ವಾಗುತ್ತದೆ ಎಂದು ನಂಬಿಸುತ್ತಾರೆ. ಹಾಗೆ ನಿಮ್ಮ ಮೊಬೈಲ್ ಗೆ ಓಟಿಪಿ ಬಂದಿದೆ ಎಂದು ನಬಿಸುತ್ತಾರೆ. ಯಾವುದೇ ಕಾರಣಕ್ಕೂ ಮತ್ತೊಬ್ಬ–ರಿಗೆ ಓಟಿಪಿ ಹೇಳಬಾರದು. ಈ ತರ ಯಾವುದೇ ಕರೆ, ಸಂದೇಶ ಬಂದರೆ ಹತ್ತಿರದ ಸೈಬರ್ ಕ್ರೈಮ್ ಗೆ ದೂರು ನೀಡಬೇಕು. ರಾಷ್ಟ್ರೀಯ ಹೆಲ್ಪ್ ಲೈನ್ 1930 ಕ್ಕೆ ಕರೆ ಮಾಡಿ ದೂರು ದಾಖಲಿಸಿದರೆ ತಕ್ಷಣವೇ ವರ್ಗಾವಣೆ ಆದ ಹಣವನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.





ವಿಜಯಪುರ ಬಳಕೆದಾರರ ಸಂಘದ ಅಧ್ಯಕ್ಷ ಹಾಗೂ ನ್ಯಾಯವಾದಿಗಳಾದ ಎಂ.ಜಿ. ಮಠಪತಿ ಉಪನ್ಯಾಸ ನೀಡಿ, ಆನಲೈನ್ ನಲ್ಲಿ ವ್ಯವಹಾರ ಮಾಡುವಾಗ ಎಚ್ಚರಿಕೆ ಅಗತ್ಯವಾಗಿದೆ. ಕೃತಕ ಬುದ್ಧಿಮತ್ತೆಯ ತಂತ್ರಜ್ಞಾನದ ಬಳಕೆ ಮಾಡುವಾಗ ಅದರ ಬಗ್ಗೆ ಮಾಹಿತಿ ಹೊಂದಿರುವುದು ಅವಶ್ಯಕತೆಯಾಗಿದೆ. ಜಾಲತಾಣದಲ್ಲಿ ಬರುವ ಮಾಹಿತಿಯನ್ನು ನಂಬಿ ವ್ಯವಹಾರ ಮಾಡಬಾರದು. ಕೂಲಂಕುಷವಾಗಿ ಪರಿಶೀಲಿಸಿ ಮುಂದುವರೆಯಬೇಕು ಎಂದರು.

ಜಿಲ್ಲಾ ಗ್ರಾಹಕರ ದೂರು ಪರಿಹಾರ ಆಯೋಗದ ಅಧ್ಯಕ್ಷರಾದ ಅಂಬಾದಾಸ ಕುಲಕರ್ಣಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ವೇದಿಕೆಯ ಮೇಲೆ ಜಿಲ್ಲಾ ಗ್ರಾಹಕ ದೂರು ಪರಿಹಾರ ಆಯೋಗದ ಸದಸ್ಯರಾದ ವಿದ್ಯಾ ಗಲಗಲಿ, ಕಾನೂನು ಮಾಪನ ಶಾಸ್ತ್ರ ಸಹಾಯಕ ನಿರ್ದೇಶಕರಾದ ಶ್ರೀಕಾಂತ ಬುರಾಣಪುರ, ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ವಿನಯಕುಮಾರ ಪಾಟೀಲ, ಕೆ ಎಫ್ ಸಿ ಎಸ್ ಸಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಡಿ. ಆರ್. ನಾಯ್ಕೋಡಿ, ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರ ಹಾಗೂ ನ್ಯೂ ಸಂಸ್ಥೆ ಯ ಅಧ್ಯಕ್ಷರಾದ ಎಸ್. ಎಂ. ಕರೇಕಲ್ ಉಪಸ್ಥಿತರಿದ್ದರು.

ಎಚ್. ಎ. ಮಮದಾಪೂರ ಕಾರ್ಯಕ್ರಮ ನಿರೂಪಿಸಿದರು. ನಾಮದೇವ ಚವ್ಹಾಣ ವಂದಿಸಿದರು.

# ಮಾ.15ರಂದು ರಾಜ್ಯ ಮಟ್ಟದ ವಿಚಾರ ಸಂಕಿರಣ

ಉದಯರಶ್ಮಿ ನ್ಯೂಸ್

ವಿಜಯಪುರ: ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಹಾಗೂ ಬೆಂಗಳೂರಿನ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ಇವರ ಸಹಯೋಗದಲ್ಲಿ 'ರಾಜಮಾತಾ ಜೀಜಾವುಮಾಸಾಹೇಬ್ ಅವರ ಜೀವನ ಮತ್ತು ಆದರ್ಶಗಳು' ಎಂಬ ವಿಷಯದ ಕುರಿತು ಇದೇ ದಿ.15 ರಂದು ಬೆಳಗ್ಗೆ 11:00 ಗಂಟೆಗೆ ವಿವಿಯ ಜ್ಞಾನಶಕ್ತಿ ಆವರಣದಲ್ಲಿ ಒಂದು ದಿನದ ರಾಜ್ಯ ಮಟ್ಟದ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಮಹಿಳಾ ವಿವಿಯ ಕುಲಪತಿ ಪ್ರೊ.ಬಿ.ಕೆ ತುಳಸಿಮಾಲ ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಬೆಂಗಳೂ–ರಿನ ಕರ್ನಾಟಕ ರಾಜ್ಯ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ವ್ಯವಸ್ಥಾಪಕ ನಿರ್ದೇಶಕ ಡಾ. ಪ್ರಕಾಶ ಪಾಗೋಜಿ ಭಾಗವಹಿಸಲಿದ್ದಾರೆ. ವಿಶೇಷ ಆಮಂತ್ರಿತರಾಗಿ ನಗರದ ಹಿರಿಯ ನ್ಯಾಯವಾದಿ ತುಳಸಿರಾಮ ಸೂರ್ಯವಂಶಿ, ಉದ್ಯಮಿ ವಿಜಯಕುಮಾರ ಚವ್ಹಾಣ, ಕರ್ನಾಟಕ ಕ್ಷತ್ರಿಯ ಮರಾಠ ಪರಿಷತ್ತು ಜಿಲ್ಲಾಧ್ಯಕ್ಷ ಬಿ.ಬಿ.ಶೇವಳಕರ ಹಾಗೂ ಮಹಾನಗರ ಪಾಲಿಕೆ ಸದಸ್ಯ ರಾಹುಲ ಜಾಧವ ಭಾಗವಹಿಸಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಿಳಾ ವಿವಿಯ ಕುಲಸಚಿವ ಶಂಕರಗೌಡ ಸೋಮನಾಳ ವಹಿಸಲಿದ್ದಾರೆ.

ತಾಂತ್ರಿಕ ಗೋಷ್ಠಿಗಳು:

ಮೊದಲನೆಯ ತಾಂತ್ರಿಕ ಗೋಷ್ಠಿಯಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಹಂಪಿಯ ಕನ್ನಡ ವಿಶ್ವವಿದ್ಯಾನಿಲಯದ ನಿವೃತ್ತ ಪ್ರಾಧ್ಯಾಪಕ ಹಾಗೂ ಸಂಸ್ಕೃತಿ ಚಿಂತಕ ಡಾ. ವಿಠ್ಠಲರಾವ ಗಾಯಕವಾಡ 'ಮರಾಠ ಸಾಮ್ರಾಜ್ಯ, ಸಂಸ್ಕೃತಿ ಮತ್ತು ಚಾರಿತ್ರಿಕ ಅಂಶಗಳು' ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದು, ಅಧ್ಯಕ್ಷತೆಯನ್ನು ವಿವಿಯ ಶಿಕ್ಷಣ ನಿಕಾಯ ಡೀನ ಡಾ. ರಾಜಕುಮಾರ ಮಾಲಿಪಾಟೀಲ ವಹಿಸಲಿದ್ದಾರೆ.

ಗೋಷ್ಠಿಯಲ್ಲಿ ನಗರದ ನಿವೃತ್ತ ಪ್ರಾಚಾರ್ಯ ಡಾ. ಎಸ್. ಜೆ.ಪವಾರ ಹಾಗೂ ವಿವಿಯ ಮಹಿಳಾ ಅಧ್ಯಯನ ಕೇಂದ್ರದ ಮುಖ್ಯಸ್ಥೆ ಡಾ. ಲಕ್ಷ್ಮೀದೇವಿ ವೈ ಉಪಸ್ಥಿತಲಿರಲಿದ್ದಾರೆ.

ಎರಡನೆಯ ಗೋಷ್ಠಿಯಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಬಾಗಲಕೋಟೆಯ ಸಾಹಿತಿ ಡಾ. ಪ್ರಕಾಶ ಗ. ಖಾಡೆ 'ರಾಜಮಾತಾ ಜೀಜಾವುಮಾಸೇಬ ಅವರ ಆದರ್ಶ ವ್ಯಕ್ತಿತ್ವ' ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದು, ಅಧ್ಯಕ್ಷತೆಯನ್ನು ವಿವಿಯ ಸಮಾಜ ವಿಜ್ಞಾನ ನಿಕಾಯ ಡೀನ ಡಾ. ಶಾಂತಾದೇವಿ ಟಿ ವಹಿಸಲಿದ್ದಾರೆ.

ಗೋಷ್ಠಿಯಲ್ಲಿ ವಿವಿಯ ಕನ್ನಡ ಅಧ್ಯಯನ ವಿಭಾಗದ ಮುಖ್ಯಸ್ಥ ಮಹೇಶ ಚಿಂತಾಮಣಿ ಹಾಗೂ ಕಾಲೇಜು ಅಭಿವೃದ್ಧಿ ಮಂಡಳಿಯ ನಿರ್ದೇಶಕ ಪ್ರೊ. ಯು.ಕೆ.ಕುಲಕರ್ಣಿ ಉಪಸ್ಥಿತಲಿರಲಿದ್ದಾರೆ.

ಸಮಾರೋಪ ಸಮಾರಂಭ:

ಸಂಜೆ 4:00 ಗಂಟೆಗೆ ನಡೆಯುವ ಸಮಾರೋಪ ಸಮಾರಂಭದಲ್ಲಿ ಬೆಂಗಳೂ–ರಿನ ಕರ್ನಾಟಕ ರಾಜ್ಯ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ವ್ಯವಸ್ಥಾಪಕ ನಿರ್ದೇಶಕ ಡಾ. ಪ್ರಕಾಶ ಪಾಗೋಜಿ ಸಮಾರೋಪ ಭಾಷಣ ಮಾಡಲಿದ್ದು, ಅಧ್ಯಕ್ಷತೆಯನ್ನು ಮಹಿಳಾ ವಿವಿಯ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ವಿಭಾಗ ಪ್ರಾಧ್ಯಪಕ ಜ್ಯೋತಿ ಧಮ್ಮ ಪ್ರಕಾಶ ವಹಿಸಲಿದ್ದಾರೆ. ಸಮಾರಂಭದಲ್ಲಿ ವಿವಿಯ ಸಮಾಜಶಾಸ್ತ್ರ ಅಧ್ಯಯನ ವಿಭಾಗದ ಮುಖ್ಯಸ್ಥ ಎಮ್.ಪಿ.ಬಳಿಗಾರ, ಬೆಂಗಳೂ–ರಿನ ಕರ್ನಾಟಕ ಲಲಿತಕಲಾ ಅಕಾಡೆಮಿ ಮಾಜಿ ಸದಸ್ಯ ರಮೇಶ ಚವ್ಹಾಣ, ವಿವಿಯ ಅಲ್ಪಸಂಖ್ಯಾತರ ಕೋಶ ಸಂಯೋಜಕ ರಾಜು ಬಾಗಲಕೋಟ ಭಾಗವಹಿಸಲಿದ್ದಾರೆ ಎಂದು ಹಿಂದೂಳಿದ ವರ್ಗಗಳ ಕೋಶದ ಸಂಯೋಜಕ ಪ್ರೊ. ವಿಷ್ಣು ಎಂ. ಶಿಂದೆ ವಿವಿಯ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉದಯರಶ್ಮಿ ದಿನಪತ್ರಿಕೆ

# ಸಾಧ್ಯವೆಂದರೆ ಗೆಲುವು ನಿಮ್ಮದೇ

ನಾವೆಲ್ಲರೂ ಉತ್ತಮ ಮತ್ತು ಯಶಸ್ವಿ ಜೀವನವನ್ನು ಹುಡುಕುತ್ತಿದ್ದೇವೆ. ಆದರೆ ನಮ್ಮ ಮನೋಭಾವವು ಅದನ್ನು ಕಷ್ಟವಾಗಿಸುತ್ತಿದೆ. ಸಕಾರಾತ್ಮಕ ಮನಸ್ಥಿತಿಯನ್ನು ಬೆಳೆಸಿಕೊಳ್ಳುವುದ–ರಿಂದ ಬೇಕಾದ ಜೀವನವನ್ನು ಪಡೆಯಬಹುದು. ಸಕಾರಾತ್ಮಕ ಮನೋಭಾವನೆಯೆಂದರೇನು? ಅದನ್ನು ಬೆಳೆಸಿಕೊಂಡು ಹೇಗೆ ಗೆಲ್ಲಬಹುದೆಂಬುದನ್ನು ತಿಳಿಯೋಣ ಬನ್ನಿ.

ಸಕಾರಾತ್ಮಕ ಮನೋಭಾವ ಎಂದರೆ..

ಸಕಾರಾತ್ಮಕ ಮನೋಭಾವದ ಕುರಿತು ರೆಮೆಜ್ ನಾಸನ್ ಹೀಗೆ ಹೇಳುತ್ತಾರೆ. 'ಧನಾತ್ಮಕ ಚಿಂತನೆಯು ಮಾನಸಿಕ ಮತ್ತು ಭಾವನಾತ್ಮಕ ಮನೋಭಾವವಾಗಿದ್ದು. ಅದು ಜೀವನದ ಪ್ರಕಾಶಮಾನವಾದ ಭಾಗವನ್ನು ಕೇಂದ್ರೀಕರರಿಸುತ್ತದೆ ಮತ್ತು ಸಕಾರಾತ್ಮಕ ಫಲಿತಾಂಶಗಳನ್ನು ನಿರೀಕ್ಷಿಸುತ್ತದೆ.' ಇನ್ನೊಂದು ಹೆಚ್ಚು





● ಜಯಶ್ರೀ.ಜೆ.ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು, ಬೆಳಗಾವಿ
9449234142

ವಿಸ್ತೃತವಾದ ಚರ್ರಿಯವರು ನೀಡಿರುವ ವ್ಯಾಖ್ಯಾನವನ್ನು ನೋಡುವುದಾದರೆ ' ಧನಾತ್ಮಕ ಚಿಂತನೆಯು ವಾಸ್ತವವಾಗಿ ಜೀವನದ ಸವಾಲುಗಳನ್ನು ಸಕಾರಾತ್ಮಕ ದೃಷ್ಟಿಕೋನದಿಂದ ಸಮೀಪಿಸುವುದು ಎಂದರ್ಥ. ಕೆಟ್ಟ ವಿಷಯಗಳನ್ನು ತಪ್ಪಿಸುವುದು ಅಥವಾ ನಿರ್ಲಕ್ಷಿಸುವುದು ಎಂದಥ–ರ್ಥವಲ್ಲ. ಬದಲಾಗಿ ಸಂಭಾವ್ಯ ಕೆಟ್ಟ ಸನ್ನಿವೇಶಗಳನ್ನು ಹೆಚ್ಚು ಬಳಸಿಕೊಳ್ಳುವುದು. ಇತರ ಜನರಲ್ಲಿ ಉತ್ತಮವಾದುದದ್ದನ್ನು ನೋಡಲು ಪ್ರಯತ್ನಿಸುವುದು ಮತ್ತು ನಿಮ್ಮನ್ನು ನಿಮ್ಮ ಸಾಮರ್ಥ್ಯಗಳನ್ನು ಸಕಾರಾತ್ಮಕವಾಗಿ ನೋಡುವುದನ್ನು ಒಳಗೊಂಡಿರುತ್ತದೆ.' ಧನಾತ್ಮಕವಾದ ಮನಸ್ಥಿತಿಯು ಪ್ರಕಾಶಮಾನವಾದ ಬದಿಯಲ್ಲಿ ಗಮನಹ–ರಿಸುವ ಮತ್ತು ಸವಾಲುಗಳನ್ನು ಧನಾತ್ಮಕ ದೃಷ್ಟಿಕೋನದಿಂದ ಸಮೀಪಿಸುವ ಪ್ರವೃತ್ತಿಯೆಂದು ಈ ವ್ಯಾಖ್ಯಾನಗಳಿಂದ ತಿಳಿದು ಬರುತ್ತದೆ. ಸಕಾರಾತ್ಮಕ ಮನಸ್ಥಿತಿಯನ್ನು ಹೊಂದುವುದು ಎಂದರೆ ಧನಾತ್ಮಕ ಚಿಂತನೆಯನ್ನು ಅಭ್ಯಾಸ ಮಾಡುವುದು. ನಿರಂತರವಾಗಿ ಬೆಳ್ಳಿ ರೇಖೆಯನ್ನು ಹುಡುಕುವುದು ಮತ್ತು ನೀವು ಎದುರಿಸುವ ಯಾವುದೇ ಪರಿಸ್ಥಿತಿಯಲ್ಲೂ ಉತ್ತಮವಾದುದನ್ನೇ ಹೆಕ್ಕಿ ತೆಗೆಯುವುದು.

ಗುಣಲಕ್ಷಣಗಳು

ಆಶಾವಾದ: ನಿಮ್ಮ ಪ್ರಯತ್ನಗಳು ಫಲ ನೀಡುವುದಿಲ್ಲವೆಂದು ಊಹಿಸುವ ಬದಲು ಅವಕಾಶಗಳನ್ನು ಪಡೆಯುವ ಇಚ್ಛೆ. ಹೊಂದುವುದು. ಪ್ರಯತ್ನಿಸುವುದರಿಂದ ಪಡೆದುಕೊಳ್ಳುತ್ತೇನೆಂಬ ಮನೋಭಾವ.

ಸ್ವೀಕಾರ: ಜೀವನದಲ್ಲಿ ಎಲ್ಲವೂ ನೀವು ಬಯಸಿದಂತೆ ನಡೆಯುವುದಿಲ್ಲ. ಎಂದು ಒಪ್ಪಿಕೊಳ್ಳುವುದು. ಅದರೊಂದಿಗೆ ತಪ್ಪುಗಳಿಂದ ಕಲಿಯುವುದು.

ಸ್ಥಿತಿಸ್ಥಾಪಕತ್ವ: ಬದುಕಿನಲ್ಲಿ ಘಟಿಸುವ ವಿಷಯಗಳು ನಮ್ಮ ಕೈಯಲಿಲ್ಲವೆಂದು ಬಿಟ್ಟುಕೊಡುವ ಬದಲು ಪ್ರತಿಕೂಲತೆ ನಿರಾಶೆ ವೈಫಲ್ಯತೆಯಲ್ಲೂ ಪುಟಿದೇಳುವುದು.

ಕೃತಜ್ಞತೆ: ನಿರಂತರವಾಗಿ ಒಳ್ಳೆಯದನ್ನು ಪ್ರಶಂಸಿಸುವುದು. ಕಷ್ಟದಲ್ಲಿ ಕೈ ಹಿಡಿದವರನ್ನು ಗೌರವಿಸುವುದು ಮತ್ತು ಮರೆಯದೆ ನೆನೆಯುವುದು.

ಪ್ರಜ್ಞೆ /ಜಾಗರೂಕತೆ: ಜಾಗೃತಿಗೆ ಮನಸ್ಸನ್ನು ಅರ್ಪಿಸುವುದು ಮತ್ತು



ಕೇಂದ್ರೀಕರಿಸುವ ಸಾಮರ್ಥ್ಯವನ್ನು ಹೆಚ್ಚಿಸುವುದು.


ಸಮಗ್ರತೆ: ಸ್ವಾರ್ಥಿಯಾಗುವ ಇಲ್ಲವೇ ಮೋಸಗೊಳಿಸುವ ಗುಣವನ್ನು ಬಿಟ್ಟು ಗೌರವಾನ್ವಿತ, ನೀತಿವಂತ ಮತ್ತು ನೇರವಾಗಿರುವುದು.

ಈ ಗುಣಲಕ್ಷಣಗಳು ಮಾತ್ರವಲ್ಲದೆ ಬೇರೆ ದಿಕ್ಕಿನಲ್ಲಿಯೂ ಕೆಲಸ ಮಾಡಬಹುದು. ಮನಸ್ಸಿನಷ್ಟು ಪ್ರಬಲವಾದದ್ದು ಯಾವುದೂ ಇಲ್ಲ. ಮನಸ್ಸು ಮಾಡಿದರೆ ಧನಾತ್ಮಕ ಮನಸ್ಥಿತಿಯನ್ನು ಉಳಿಸಿಕೊಳ್ಳಲು ಅನುಮತಿಸಿದಿರೆ ನಿಮ್ಮ ವರ್ತನೆ ನಿಮ್ಮನ್ನು ಅನುಸರಿಸುತ್ತದೆ. ನಿಮ್ಮನ್ನು ನೀವು ಸಂತೋಷವಾಗಿ–ರಿಸಿಕೊಳ್ಳಬಹುದು. ಸಕಾರಾತ್ಮಕ ಮನೋಭಾವ ಬೆಳೆಸಲು ಹಲವು ಮಾರ್ಗಗಳಿವೆ. ನೀವು ಪ್ರಾರಂಭಿಸಲು ಸಹಾಯ ಮಾಡುವ ಕೆಲವು ಸಲಹೆಗಳು ಇಲ್ಲಿವೆ.

ಆಂತರಿಕ ಸಂಭಾಷಣೆ ಆಲಿಸಿ

ನಕಾರಾತ್ಮಕತೆಯನ್ನು ಎದುರಿಸುತ್ತಿರುವಾಗ ಅದನ್ನು ಸಕಾರಾತ್ಮಕಗೊಳಿಸಲು ಪ್ರಯತ್ನಿಸಿ. ನನಗೆ ಆ ಕೆಲಸ ಬರುವುದಿಲ್ಲ. ಎನ್ನುವ ಬದಲಾಗಿ 'ಬಹುಶಃ ಇದು ನನ್ನ ಸಾಮರ್ಥ್ಯಗಳಲ್ಲಿ ಒಂದಲ್ಲ ಆದರೆ ನಾನು ಶ್ರದ್ಧೆಯಿಂದ ಶ್ರಮವಹಿಸಿದರೆ ಖಂಡಿತ ಆ ಸಾಮರ್ಥ್ಯವನ್ನು ಪಡೆದುಕೊಳ್ಳುತ್ತೇನೆ.' ಎಂಬ ಆಂತರಿಕ ಸಂಭಾಷಣೆಗೆ ಕಿವಿಗೊಡಿ. ಯಾರೂ ಪರಿಪೂರ್ಣರಲ್ಲವೆಂಬುದು ನಿಮ್ಮನ್ನೂ ಒಳಗೊಂಡಿದೆ ಎಂಬುದನ್ನು ಒಪ್ಪಿಕೊಳ್ಳಿ. ನಿಮ್ಮ ಸಾಧನೆಯ ಮತ್ತು ಶ್ರಮದ ಬಗ್ಗೆ ಹೆಮ್ಮೆಪಡಿ. ಸೋಲುಗಳನ್ನು ಕಲಿಕೆಯ ಅನುಭವಗಳನ್ನಾಗಿಸಿ ಯಶಸ್ಸನ್ನಾಗಿ ಪರಿವರ್ತಿಸಿ.

ಸಂವಹನ ನಡೆಸಿ





ಸಕಾರಾತ್ಮಕ ಪರಿಸರದಲ್ಲಿರಿ. ನಿಮ್ಮನ್ನು ಧನಾತ್ಮಕವಾಗಿ ಬಲಪಡಿಸುವ ಸಕಾರಾತ್ಮಕ ಜನರೊಂದಿಗೆ ಸಂವಹನ ನಡೆಸಿ.ಅವರೊಂದಿಗೆ ಕೆಲಸ ಮಾಡಿ ಸಕಾರಾತ್ಮಕ ನೆನಪುಗಳಿರುವ ಜಾಗಗಳಿಗೆ ಭೇಟಿ ಕೊಡಿ.ಇತರರಿಗೆ ಸಹಾಯ ಮಾಡಿ ಇದು ನಿಮಗೆ ತೃಪ್ತಿಯ ಭಾವವನ್ನು ನೀಡುತ್ತದೆ. ಮತ್ತು ನಿಮಗೆ ಒಳಗೊಳಗೆ



ಸಂತೋಷವನ್ನು ನೀಡುತ್ತದೆ. ಸರಳವಾದ ಅಂಶಗಳಿಂದ ಆನಂದವನ್ನು ಪಡೆಯಲು ಕಲಿಯಿರಿ. ನಗು ಅತ್ಯಂತ ಶಕ್ತಿಶಾಲಿ ಮೂಡ್. ಮನಸಾರೆ ನಗಲು ಮನಸ್ಸು ಮಾಡಿ. ಎಲ್ಲರೂ ಪ್ರೀತಿಗೆ ಅರ್ಹರು. ಮತ್ತು ಎಲ್ಲರೂ ಪ್ರೀತಿಸುತ್ತಾರೆ. ಹೀಗಾಗಿ ನಿಮ್ಮನ್ನು ಇತರರು ಪ್ರೀತಿಸಲು ಅನುಮತಿಸಿ.ನೀವೂ ಪ್ರೀತಿಯಿಂದ ನಡೆದುಕೊಳ್ಳಿ. ನಿಮ್ಮ ಕಾರ್ಯಗಳು ಆಲೋಚನೆಗಳು ಮತ್ತು ಭಾವನೆಗಳಿಗೆ ಜವಾಬ್ದಾ–ರಿಯನ್ನು ತೆಗೆದುಕೊಳ್ಳಿ.

ದಿನಚರಿ ಪರೀಕ್ಷಿಸಿ

ನಿಮ್ಮ ಜೀವನವನ್ನು ಸೂಕ್ಷ್ಮವಾಗಿ ಗಮನಿಸಿ. ನಿಮ್ಮ ದಿನಚರಿಯು ನಿಮ್ಮ ವರ್ತನೆಯ ಮೇಲೆ ಬೀರುವ ಪರಿಣಾಮಗಳನ್ನು ಪರೀಕ್ಷಿಸಿ. ಪ್ರಯೋಜನಕಾರಿ ಸಕಾರಾತ್ಮಕ ಸಂಬಂಧಗಳನ್ನು



ಹೊಂದಿದ್ದೇನೆಯೇ? ಸಕಾರಾತ್ಮಕ ಮನೋಭಾವವನ್ನು ಉಳಿಸಿಕೊಳ್ಳಲು ಧನಾತ್ಮಕ ಶಕ್ತಿಯನ್ನು ಉತ್ತೇಜಿಸುವ ದಿನಚರಿಯನ್ನು ಹೊಂದಿದ್ದೇನೆಯೇ? ನನ್ನ ಮನಸ್ಸಿನ ಸ್ಥಿತಿ ಮತ್ತು ಅದರ ಬದಲಾವಣೆಗಳ ಬಗ್ಗೆ ನನಗೆ ತಿಳಿದಿದೆಯೇ? ನಕಾರಾತ್ಮಕ ಮನಸ್ಥಿತಿಯಲ್ಲಿದ್ದರೆ ಅದನ್ನು ಬದಲಾಯಿಸಲು ಸಾಧ್ಯವೇ? ನನ್ನ ವಾಸ ಸ್ಥಳವು ಸಕಾರಾತ್ಮಕ ವಾತಾವರಣವೇ? ಇಲ್ಲದಿದ್ದರೆ ಅದನ್ನು ಸಕಾರಾತ್ಮಕವಾಗಿಸಲು ಏನು ಮಾಡಬಹುದೆಂಬ ಪ್ರಶ್ನೆಗಳನ್ನು ಕೇಳಿಕೊಳ್ಳಿ. ಸಂಗೀತ ಆಲಿಸಿ. ನಿಷ್ಕ್ರೀಯರಾಗಿ ಟಿವಿ ನೋಡಬೇಡಿ. ಏಕಾಂಗಿಯಾರಲು, ಆನಂದಿಸುವ ಕೆಲಸಗಳಿಗೆ ಸಮಯ ನೀಡಿ. ಸಂತೊಷವಾಗದ ವಿಷಯಗಳನ್ನು ನಿರ್ಲಕ್ಷಿಸಿ. ಸಂತೋಷವು ವಸ್ತುನಿಷ್ಟವಲ್ಲವೆಂಬುದನ್ನು ಅರಿತುಕೊಳ್ಳಿ

ಗೆದ್ದೇ ಗೆಲ್ಲುವಿರಿ

ನಿಮ್ಮನ್ನು ಸೋಲಿಸಲಾಗಿದೆ.. ನಿಮಗೆ ಧೈರ್ಯವಿಲ್ಲ. ಗೆಲ್ಲಲು ಬಯಸಿದರೂ ನಿಮ್ಮಿಂದ ಸಾಧ್ಯವಿಲ್ಲವೆಂದು ಭಾವಿಸಿದರೆ ಅದು ನೀವು ಪ್ರಯತ್ನಿಸದಿರುವ ನೆಪವಷ್ಟೆ. ಯಶಸ್ಸು ವ್ಯಕ್ತಿಯ ಇಚ್ಛೆಯಿಂದ ಆರಂಭಗೊಳ್ಳುತ್ತದೆ. ಎಲ್ಲವೂ ನಮ್ಮ ಮನಸ್ಥಿತಿಯಲ್ಲಿದೆ. ಜೀವನವೊಂದು ಯುದ್ಧದಂತೆ ಬಲವಾದ ಮತ್ತು ವೇಗವಾದ ವ್ಯಕ್ತಿಗಳು ಅಲ್ಲಿ ಗೆಲ್ಲುತ್ತಾರೆ. ಆದರೂ ನಿಮಗೆ ಸಾಧ್ಯವೆಂದು ಯೋಚಿಸಿದರೆ. ಬೇಗ ಅಥವಾ ನಂತರ ಗೆದ್ದೇ ಗೆಲ್ಲುವಿರಿ.

# ಜಿಲ್ಲಾ ಪ್ರ.ಕಾರ್ಯದರ್ಶಿಯಾಗಿ ಕಂದಗಲ್ ಆಯ್ಕೆ

ಉದಯರಶ್ಮಿ ನ್ಯೂಸ್



ಚಡಚಣ: ಪಟ್ಟಣದ ಶ್ರೀನಿವಾಸ ಕಂದಗಲ್ ಅವರು ಬಿಜೆಪಿ ಎಸ್.ಸಿ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾಗಿದ್ದಾರೆ ಎಂದು ಬಿಜೆಪಿಯ ಎಸ.ಸಿ ಮೋರ್ಚಾ ಜಿಲ್ಲಾ ಅಧ್ಯಕ್ಷ ಮಂಜುನಾಥ ಮೀಸಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇವರ ಆಯ್ಕೆಗೆ ಪಟ್ಟಣ ಪಂಚಾಯ್ತಿ ಸದಸ್ಯ ಮಲ್ಲು ದೋತ್ರೆ, ಮುಖಂಡರಾದ ಸುರೇಶ ವಡ್ಡರ, ಕೃಷ್ಣ ಗುಂಜೇ, ಶಿವಾನಂದ ಪಾಟೀಲ, ನಾಮದೇವ ಕಂದಗಲ, ಮಾದೇವ ಪೂಜಾರಿ, ಶಿವಾನಂದ ಮೇತ್ರಿ, ಸಿದ್ದು ಪೂಜಾರಿ, ಸುಧೀರ ಅಂಕೋಲೆ, ಸುಭಾಸ್ ತಳಕೇರಿ, ಶಂಕರ್ ಗೌಂಡಿ, ಶಿವಪ್ಪ ತಿಮ್ಮಣ್ಣ ಗೌಂಡಿ, ಸುರೇಶ್ ಎಲ್ಲಪ್ಪ ಪವಾರ, ವಿದ್ಯಾಧರ ಬನಪಟ್ಟಿ, ಪರಶುರಾಮ ಬನಪಟ್ಟಿ, ರಾಮಚಂದ್ರ ಬನಪಟ್ಟಿ, ತಿಮ್ಮಣ್ಣ ಗಾಡಿವಡ್ಡರ್ ಹರ್ಷ ವ್ಯಕ್ತಪಡಿಸಿದ್ದಾರೆ.

# ರಿಜರ್ವೇಶನ್ ಕೌಂಟರ್ ಪುನಃ ಪ್ರಾರಂಭಕ್ಕೆ ಜಿಗಜಿಣಗಿ ಪತ್ರ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕೋವಿಡ್–19 ಅವಧಿಯಲ್ಲಿ ಸ್ಥಗಿತವಾಗಿದ್ದ ಇಬ್ರಾಹಿಂಪುರ ರೈಲು ನಿಲ್ದಾಣದ ರಿಜರ್ವಶನ್ ಕೌಂಟರ್ ನ್ನು ಪುನಃ ಪ್ರಾರಂಭಿಸಬೇಕು ಎಂದು ಸಂಸದ ರಮೇಶ ಜಿಗಜಿಣಗಿ ಹುಬ್ಬಳ್ಳಿ ಯ ಸೌತ್ ವೆಸ್ಟರ್ನ್ ರೈಲ್ವೆ ಇಲಾಖೆಯ ಜನರಲ್ ಮ್ಯಾನೇಜರ್ಗೆ ಪತ್ರವನ್ನು ಬರೆದಿದ್ದಾರೆ.

# ಜಿಲ್ಲಾ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಡಾ ವ್ಹಿ.ಡಿ.ಐಹೊಳ್ಳಿ ಆಯ್ಕೆ

**ಉದಯರಶ್ಮಿ ನ್ಯೂಸ್**



ವಿಜಯಪುರ: ನಗರದ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ಜರುಗಿದ ಕಾರ್ಯಕಾರಿ ಸಭೆಯಲ್ಲಿ 19 ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಡಾ ವ್ಹಿ ಡಿ ಐಹೊಳ್ಳಿ ಹಿರಿಯ ಸಾಹಿತಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ಹಾಸಿಂಪೀರ ವಾಲೀಕಾರ ಅವರು ಮಾತನಾಡಿ, ಜಿಲ್ಲೆಯ ಹಿರಿಯ ಸಾಹಿತಿಗಳ ಆಯ್ಕೆ ಮುಕ್ತವಾಗಿ ಚರ್ಚಿಸಿ ಆಯ್ಕೆ ಮಾಡಿ ಎಂದು ಸಭೆಗೆ ವಿನಂತಿಸಿದರು.

ಸಭೆಯ ಅಧ್ಯಕ್ಷ ಸ್ಥಾನ ಕಸಾಪ ಗೌರವಾಧ್ಯಕ್ಷ ಭಾರತಿ ಪಾಟೀಲ ವಹಿಸಿದ್ದರು. ಸಭೆಯಲ್ಲಿ ಜಿಲ್ಲಾ ಕಸಾಪ ಕಾರ್ಯಕಾರಿ ಸದಸ್ಯರುಗಳು ಮತ್ತು ಎಲ್ಲ ತಾಲ್ಲೂಕಿನ ಅಧ್ಯಕ್ಷರು ಹಾಗೂ ಸದಸ್ಯರುಗಳು ಮುಕ್ತ ಚರ್ಚಿಸಿ ಹಿರಿಯ ಸಾಹಿತಿಗಳು ಆದ ನಿವೃತ್ತ ಜೆ ಎಸ್ ಎಸ್ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ ವ್ಹಿ ಡಿ ಐಹೊಳ್ಳಿ ಅವರನ್ನು ಅಂತಿಮಗೊಳಿಸಿದರು. ಇದಕ್ಕೆ ಕಸಾಪ ಅಧ್ಯಕ್ಷ ಹಾಸಿಂಪೀರ ವಾಲೀಕಾರ ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದರು.

ಸಭೆಯಲ್ಲಿ ಗೌರವ ಕೋಶಾಧ್ಯಕ್ಷ ಡಾ ಸಂಗಮೇಶ ಮೇತ್ರಿ, ಗೌರವ ಕಾರ್ಯದರ್ಶಿ ಸುಭಾಸಚಂದ್ರ ಕನ್ನೂರ, ಡಾ ಮಾಧವ ಗುಡಿ ಜಿಲ್ಲಾ ಪದಾಧಿಕಾರಿಗಳಾದ ಅಭಿಷೇಕ ಚಕ್ರವರ್ತಿ, ಮಹ್ಮದ್ ಗೌಸ್ ಹವಾಲ್ದಾರ್, ರಾಜಾಸಾಬ ಶಿವನಗುತ್ತಿ, ಸುಖದೇವಿ ಅಲಬಾಳಮಠ ತಾಲೂಕ ಘಟಕದ ಅಧ್ಯಕ್ಷರುಗಳಾದ ಡಾ ಆನಂದ ಕುಲಕರ್ಣಿ, ಸಿದ್ದರಾಮಯ್ಯ ಲಕ್ಕುಂಡಿಮಠ, ಜಿ ಪಿ ಬಿರಾದಾರ, ಶಿವಾನಂದ ಡೋಣುರ, ಶಿವಾನಂದ ಬಡಾನೂರ, ಅಶೋಕ ಆಸಂಗಿ, ರೇವಣಸಿದ್ದಪ್ಪ ಕೊಪ್ಪದ ಎಸ್ ಆಯ್ ಬಿರಾದಾರ, ದತ್ತಾತ್ರೇಯ ಮಳಖೇಡ, ರಾಘವೇಂದ್ರ ಕುಲಕರ್ಣಿ, ಸಿದ್ದಪ್ಪ ಮಾನೆ ಮುಂತಾದವರು ಉಪಸ್ಥಿತಿರಿದ್ದು ಸರ್ವಾನುಮತದಿಂದ ಒಪ್ಪಿಗೆ ನೀಡಿದರು.

ಸಭೆಯಲ್ಲಿ ಮಕ್ಬುಲ್ ಅಂಗಡಗೇರಿ, ಶಿವಪುತ್ರ ಅಂಕದ, ರೂಪಾ ರಜಪೂತ, ಸಾವಿತ್ರಿ ಮೊನಾಜೀ, ಗಂಗಮ್ಮಾ ರಡ್ಡಿ, ಲತಾ ಗುಂಡಿ, ಬಸವರಾಜ ಮೇಟಿ,ಜಯಶ್ರೀ ಹಿರೇಮಠ ಮಹಾದೇವಿ ತೆಲಗಿ, ಬಸವರಾಜ್ ಕೋನರೆಡ್ಡಿ, ಗೀತಾ ಕುಲಕರ್ಣಿ, ಶಿಲ್ಪ ಬಸ್ಮೆ, ಕಮಲ ಮೂರಾಳ, ಯುವರಾಜ ಚೋಳಕೆ ಮುಂತಾದವರು ಉಪಸ್ಥಿತರಿದ್ದರು.

## ನಾವದಗಿ ಗ್ರಾಮದಲ್ಲಿ ಮೌನಾನುಷ್ಠಾನ ಮಂಗಲೋತ್ಸವ ಹಾಗೂ ಧರ್ಮಸಭೆ

# ಸತ್ಕರ್ಮಗಳಿಂದ ಪುಣ್ಯಪ್ರಾಪ್ತಿ :ರಾಮಲಿಂಗಯ್ಯ ಶ್ರೀ

**ಉದಯರಶ್ಮಿ ನ್ಯೂಸ್**



ತಾಳಿಕೋಟಿ: ಮನುಷ್ಯ ಜೀವನದಲ್ಲಿ ಭೋಗಗಳ ದಾಸನಾಗಬಾರದು ಧರ್ಮವಂತನಾಗಿ ದಾನ–ದಾಸೋಹ ದಂಥಹ ಉದಾತ್ತ ಗುಣಗಳನ್ನು ಬೆಳೆಸಿ ಕೊಳ್ಳಬೇಕು. ಸತ್ಕರ್ಮಗಳನ್ನು ಮಾಡುವ ಅವಕಾಶ ಸಿಕ್ಕಾಗ ಅದನ್ನು ಕಳೆದು ಕೊಳ್ಳಬಾರದು ಸತ್ಕರ್ಮಗಳಿಂದಲೇ ಸ್ವರ್ಗ ಪ್ರಾಪ್ತವಾಗುತ್ತದೆ ಎಂದು ರಾಷ್ಟ್ರೀಯ ಬೇಡ ಜಂಗಮ ಸಮಾಜದ ಗೌರವ ಅಧ್ಯಕ್ಷರು ಹಾಗೂ ಜ್ಯೋತಿಷ್ಯ ರತ್ನ ಶ್ರೀರಾಮಲಿಂಗಯ್ಯ ಮಹಾಸ್ವಾಮಿಗಳು ಹೇಳಿದರು.

ತಾಲೂಕಿನ ನಾವದಗಿ ಗ್ರಾಮದ ರಾಜಗುರು ಶ್ರೀ ಪರ್ವತೇಶ್ವರ ಸಂಸ್ಥಾನ ಬೃಹನ್ ಮಠದ ಶ್ರೀ ಷ.ಬ್ರ. ರಾಜಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯರ 11ದಿನಗಳ ಮೌನಾನುಸ್ಟಾನ ಮಂಗಲೋತ್ಸವ ಅಂಗವಾಗಿ ಹಮ್ಮಿಕೊಂಡ ಧರ್ಮಸಭೆಯ ಸಮ್ಮುಖವನ್ನು ವಹಿಸಿ ಅವರು ಆಶೀರ್ವಚನ ನೀಡಿದರು. ಪ್ರಸ್ತಾವಿಕವಾಗಿ ಮಾತನಾಡಿದ ಢವಳಗಿ ಘನಮಟೇಶ್ವರ ಮಠದ ಶ್ರೀಗಳು ಮೌನಾನುಷ್ಠಾನ ಅಂದರೆ ತನ್ನನ್ನು ತಾನು ಶುದ್ಧೀಕರಿಸುವುದು ಆತ್ಮ ಉದ್ಧಾರ ಮಾಡಿಕೊಳ್ಳುವುದು ಎಂದಾಗಿದೆ ಇದೊಂದು ವಿಶಿಷ್ಟ ಸಾಧನೆಯ ಹೆಸರು ಇದರಿಂದ ಗುರು ಆದವರಿಗೆ ವಿಶೇಷ ಸಾಮಥ–ರ್ಯ ಸಿಗುತ್ತದೆ ಇದು ಭಕ್ತರನ್ನು ಸಂಸ್ಕರಿಸಲು ಅತ್ಯಗತ್ಯವಾಗಿದೆ. ಇದನ್ನು ನಿರಂತರವಾಗಿ ಮಾಡಲೇಬೇಕಾಗುತ್ತದೆ. ಗುರು ಪಟ್ಟಾಧಿಕಾರದ ಕಾರ್ಯಕ್ರಮ ಯಶಸ್ವಿಗೊಳಿಸುವಲ್ಲಿ ಭಕ್ತರ ತ್ಯಾಗ ಬಹಳ ದೊಡ್ಡದಿದೆ. ಒಂದು ವರ್ಷ ಕಳೆದ ನಂತರ ಇದರ ವಾರ್ಷಿಕೋತ್ಸವ ಬರುತ್ತದೆ ಆ ಕಾರ್ಯಕ್ರಮಕ್ಕೆ ಉಳಿದಿಬ್ಬರು ಜಗದ್ಗುರುಗಳನ್ನು ಕರೆಸಿ ಮಾಡಲಾಗುವುದು ಎಂಬದು ಅತ್ಯಂತ ಸಂತೋಷದ ವಿಷಯವಾಗಿದೆ ಎಂದರು.

ದೇವರ ಹಿಪ್ಪರಗಿ ಪರದೇಶಿ ಮಠದ ಶಿವಯೋಗಿ ಶ್ರೀಗಳು ಹಾಗೂ ಜಿಪಂ ಮಾಜಿ ಸದಸ್ಯ ಬಸನಗೌಡ ವಣಿಕ್ಯಾಳ ಮಾತನಾಡಿದರು.

ಸಮಾರಂಭದ ಸಾನಿಧ್ಯವನ್ನು ವಹಿಸಿದ ದೇವರಹಿಪ್ಪರಗಿ ಜಡಿಮಠದ ಪರಮಪೂಜ್ಯ ಶ್ರೀ ಜಡೆ ಸಿದ್ದೇಶ್ವರ ಶಿವಾಚಾರ್ಯರು ತಮ್ಮ ಆಶೀರ್ವಚನದಲ್ಲಿ ನಾವದಗಿ ಗ್ರಾಮದ ಭಕ್ತರು ತಮ್ಮ ಗ್ರಾಮದ ಹೆಸರು ಇತಿಹಾಸದಲ್ಲಿ ಅಮರವಾಗಿರುವಂಥಹ ಕೆಲಸವನ್ನು ಮಾಡಿ ತೋರಿಸಿದ್ದಾರೆ. ಶ್ರೀಗಳ ಗುರು ಪಟ್ಟಾಧಿಕಾರ ಮಹೋತ್ಸವ ಕಾರ್ಯಕ್ರಮ ಜಿಲ್ಲೆಯಲ್ಲಿ ಮಾತ್ರವಲ್ಲ ಇಡೀ ನಾಡಿನಲ್ಲಿ ಒಂದು ಇತಿಹಾಸವನ್ನು ಸ್ಥಾಪಿಸಿದೆ ಕಾರ್ಯಕ್ರಮ ನಡೆಸುವಲ್ಲಿ ಹಲವಾರು ಸಮಸ್ಯೆಗಳು ಎದುರಾದರೂ ಭಕ್ತರ ನಿಸ್ವಾರ್ಥ ಸೇವೆ ತ್ಯಾಗ ದೈವಿಶಕ್ತಿಯ ಆಶೀರ್ವಾದದಿಂದ ಎಲ್ಲವೂ ಸರಳವಾಗಿ ನಡೆದು ಯಶಸ್ವಿ ಆಯಿತು. ಈ ಕಾರ್ಯಕ್ರಮದ ಯಶಸ್ವಿಯಲ್ಲಿ ಏಳು ಜನ ಪೂಜ್ಯರ ತ್ಯಾಗ ಬಹಳಷ್ಟಿದೆ ಜೊತೆಗೆ ನಾವದಗಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರ ಸಹಾಯ ಸಹಕಾರವೂ ಇದೆ. ಮುಂದೆಯೂ ಇದೇ ರೀತಿಯಾದ ಪ್ರೀತಿ ವಿಶ್ವಾಸ ಶ್ರೀಮಠದ ಮೇಲೆ ಇರಲಿ ಎಂದರು.

ಹಲವಾರು ಗ್ರಾಮಗಳಿಂದ ಆಗಮಿಸಿದ ಶ್ರೀಮಠದ ಭಕ್ತರು ಪೂಜ್ಯ ಶ್ರೀ ರಾಜೇಂದ್ರ ಒಡೆಯರ್ ಶಿವಾಚಾರ್ಯರಿಗೆ ಗೌರವ ಸಮರ್ಪಣೆ ಸಲ್ಲಿಸಿ ಆಶೀರ್ವಾದ ಪಡೆದುಕೊಂಡರು.

ಈ ಸಮಯದಲ್ಲಿ ವೇ.ಮೂ.ಡಾ. ಗುರುಲಿಂಗಯ್ಯ ಹಿರೇಮಠ ಗುರು ಪಟ್ಟಾಧಿಕಾರ ಸ್ವಾಗತ ಸಮಿತಿಯ ಸದಸ್ಯರು ಹಾಗೂ ಅಪಾರಭಕ್ತರು ಉಪಸ್ಥಿತರಿದ್ದರು.

# ಗ್ರಾಹಕರು ತಮ್ಮ ಹಕ್ಕುಗಳನ್ನು ಅರಿತುಕೊಳ್ಳಬೇಕು :ನ್ಯಾ.ಪ್ರಕಾಶ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪ್ರತಿಯೊಬ್ಬರೂ ಒಂದಿಲ್ಲೊಂದು ಸಂದರ್ಭದಲ್ಲಿ ಗ್ರಾಹಕರು ಆಗುತ್ತಾರೆ. ಕೆಲ ಸಂದರ್ಭದಲ್ಲಿ ಗ್ರಾಹಕ–ರಿಗೆ ಅನ್ಯಾಯವಾಗುತ್ತಿರುವದು ಕಂಡುಬರುತ್ತಿದೆ. ಗ್ರಾಹಕರು ವ್ಯವಹ–ರಿಸುವಾಗ ಜಾಗೃತಿ ವಹಿಸುವ ಜೊತೆಗೆ ಗ್ರಾಹಕರ ಹಕ್ಕುಗಳ ಬಗ್ಗೆ ಅರಿತುಕೊಳ್ಳುವುದು ತುಂಬಾ ಮುಖ್ಯವಾಗಿದೆ ಎಂದು ಹಿರಿಯ ಸಿವ್ಹಿಲ್ ನ್ಯಾಯಾಧೀಶ ಪ್ರಕಾಶ ಅರ್ಜುನ ಬನಸೋಡೆ ಹೇಳಿದರು.

ಪಟ್ಟಣದ ಅಸ್ಕಿ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ ತಾಲೂಕು ಕಾನೂನು ಸೇವೆಗಳ ಸಮಿತಿ, ವಕೀಲರ ಸಂಘ ಹಾಗೂ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ವಿಶ್ವಗ್ರಾಹಕರ ಹಕ್ಕುಗಳ ದಿನಾಚರಣೆಯಂಗವಾಗಿ ಶುಕ್ರವಾರ ಹಮ್ಮಿಕೊಂಡಿದ್ದ ಕಾನೂನು ಅರಿವು–ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಾವು ಯಾವುದೇ ಒಂದು ವಸ್ತು ಖರೀದಿಸಲು ಹೋದ ಸಂದರ್ಭದಲ್ಲಿ ದಲ್ಲಾಳಿಗಳಿಂದ ಮೋಸ ಹೋಗಬಾರದೆಂದರೆ ನಾವು ನಮ್ಮ ಹಕ್ಕುಗಳ ಬಗ್ಗೆ ತಿಳಿದುಕೊಳ್ಳಬೇಕು. ತಾಲೂಕು ಕಾನೂನು ಸೇವಾ ಸಮಿತಿಯಿಂದ ಮಹಿಳೆಯರು, ಪರಿಶಿಷ್ಟ ಜಾತಿ,ಪರಿಶಿಷ್ಟ ಪಂಗಡ, ವಿಕಲಚೇತನರು ಹಾಗೂ ರೂ. 3 ಲಕ್ಷ ಆದಾಯವಿದ್ದವರು ಉಚಿತ ಕಾನೂನು ಸಲಹೆ ಪಡೆದುಕೊಳ್ಳಬಹುದು. ರಾಷ್ಟ್ರೀಯ ಲೋಕಅದಾಲತನಲ್ಲಿ ಅನೇಕ ಪ್ರಕರಣಗಳನ್ನು ರಾಜೀ ಸಂಧಾನ ಮೂಲಕ ಬಗೆಹರಿಸಿಕೊಳ್ಳಬಹುದು. ಜನರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದರು.

# ಸಮುದಾಯ ಆರೋಗ್ಯ ಕೇಂದ್ರದ ನೂತನ ಕಟ್ಟಡ ಉದ್ಘಾಟನೆ

**ಉದಯರಶ್ಮಿ ನ್ಯೂಸ್**



ತಾಳಿಕೋಟಿ: ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರ ಇದರ ವಿಸ್ತರಿಸಿದ ನೂತನ ಕಟ್ಟಡವನ್ನು ದೇವರ ಹಿಪ್ಪರಗಿ ಶಾಸಕರಾಜು ಗೌಡ ಪಾಟೀಲ ಹಾಗೂ ಮುದ್ದೇಬಿಹಾಳ ಶಾಸಕ. ಕರ್ನಾಟಕ ಸರ್ಕಾರದ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಸಿ. ಎಸ್. ನಾಡಗೌಡ (ಅಪ್ಪಾಜಿ) ಅವರು ಉದ್ಘಾಟಿಸಿದರು.

ಪಟ್ಟಣ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಈ ಮೊದಲು 30 ಹಾಸಿಗೆಗಳ ಸೌಲಭ್ಯವಿದ್ದು ಹೆಚ್ಚುತ್ತಿರುವ ಒಳ ರೋಗಿಗಳ ಸಂಖ್ಯೆಯಿಂದಾಗಿ ತೊಂದರೆಯಾಗುತ್ತಿತ್ತು ಇದನ್ನು ತಪ್ಪಿಸಲು ಸುಮಾರು ರೂ. 1.61 ಕೋಟಿ ವೆಚ್ಚದಲ್ಲಿ ವಿಸ್ತರಿಸಿದ 10 ಹಾಸಿಗೆಗಳ ನೂತನ ಕಟ್ಟಡವನ್ನು ನಿರ್ಮಾಣಮಾಡಲಾಗಿತ್ತು. ಇದನ್ನು ಉಭಯ ಶಾಸಕರು ಉದ್ಘಾಟಿಸಿ ಲೋಕಾರ್ಪಣೆಗೊಳಿಸಿದರು. ಈ ನೂತನ ಕಟ್ಟಡದಲ್ಲಿ ಹೆ–ರಿಗೆ ವಿಭಾಗವನ್ನು ಮಾತ್ರ ನಡೆಸಲಾಗುವುದು ಎಂದು ಆರೋಗ್ಯ ಆಡಳಿತಾಧಿಕಾರಿ ಶ್ರೀಶೈಲ ಹುಕ್ಕೇರಿ ತಿಳಿಸಿದರು.

ಉದ್ಘಾಟನಾ ಸಮಾರಂಭದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಸತೀಶ ತಿವಾರಿ. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ಚೋರಗಸ್ತಿ. ಜಿಲ್ಲಾ ಕಾರ್ಯದರ್ಶಿ ಸಿದ್ದನಗೌಡ ಪಾಟೀಲ್ ನಾವದಗಿ. ಮಡು ಸೌಕಾರ ಬಿರಾದಾರ. ಪ್ರಭುಗೌಡ ಮದರಕಲ್ಲ. ಸುರೇಶಧಣಿ ನಾಡಗೌಡ. ಶರಣುಧಣಿ ದೇಶಮುಖ. ಕಾಸೀಮಪಟೇಲ ಮೂಕಿಹಾಳ. ಇಬ್ರಾಹಿಂ ಮನ್ಸೂರ.ಸಿಕಂದರಸಾಬ ವಠಾರ. ಪುರಸಭೆ ಸದಸ್ಯರಾದ ಅಕ್ಕಮಹಾದೇವಿ ಕಟ್ಟಿಮನಿ. ಮಲ್ಲಿಕಾರ್ಜುನ ಪಟ್ಟಣಶೆಟ್ಟಿ. ಮುಸ್ತಫಾ ಚೌಧರಿ. ಪರಶುರಾಮ ತಂಗಡಗಿ ಹಾಗೂ ಆರೋಗ್ಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಹಿಂ.ವರ್ಗಗಳ ಮೋರ್ಚಾ ಜಿಲ್ಲಾ ಕಾರ್ಯದರ್ಶಿಯಾಗಿ ಕಂಬಾರ

**ಉದಯರಶ್ಮಿ ನ್ಯೂಸ್**



ಇಂಡಿ: ಪಟ್ಟಣದ ನಿವಾಸಿ, ಬಿಜೆಪಿ ಕಾರ್ಯಕರ್ತ ಶಾಂತು ಕಂಬಾರ ಅವರನ್ನು ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾದ ಜಿಲ್ಲಾ ಕಾರ್ಯದರ್ಶಿಯಾಗಿ ಆಯ್ಕೆ ಮಾಡಿ ಹಿಂದುಳಿದ ವರ್ಗಗಳ ಮೋರ್ಚಾದ ವಿಜಯಪುರ ಜಿಲ್ಲಾ ಅಧ್ಯಕ್ಷ ಸಿದ್ದು ಬುಳ್ಳಾ ಆದೇಶ ಹೊರಡಿಸಿದ್ದಾರೆ.

ಪಕ್ಷ ಸಂಘಟನೆಯಲ್ಲಿ ಸಕ್ರೀಯವಾಗಿ ತೊಡಗಿಕೊಂಡು ಕಾರ್ಯಕರ್ತರ ಪಡೆ ಕಟ್ಟಿ ಪಕ್ಷ ಅಧಿಕಾರಕ್ಕೆ ತರುವಲ್ಲಿ ಶ್ರಮಿಸಬೇಕೆಂದು ಆದೇಶದಲ್ಲಿ ತಿಳಿಸಲಾಗಿದೆ.

# ಮಾ.17ರಂದು ಉಚಿತ ಕಣ್ಣಿನ ತಪಾಸಣೆ & ಶಸ್ತ್ರಚಿಕಿತ್ಸಾ ಶಿಬಿರ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಕೋರವಾರ ಗ್ರಾಮದಲ್ಲಿ ದಿ.17 ಭಾನುವಾರದಂದು ಉಚಿತ ಕಣ್ಣಿನ ತಪಾಸಣೆ ಹಾಗೂ ಶಸ್ತ್ರಚಿಕಿತ್ಸಾ ಶಿಬಿರವನ್ನು ಏರ್ಪಡಿಸಲಾಗಿದೆ.

ತಾಲ್ಲೂಕಿನ ಕೋರವಾರ ಗ್ರಾಮದ ಸರಸ್ವತಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ವಿಜಯಪುರ ನಗರದ ಡಾ.ಪ್ರಭುಗೌಡ ಲಿಂಗದಳ್ಳಿ(ಚಬನೂರ)ರವರ ಅನುಗ್ರಹ ಕಣ್ಣಿನ ಆಸ್ಪತ್ರೆ, ಅನುಗ್ರಹ ವ್ಹಿಜನ್ ಫೌಂಡೇಷನ್ ಟ್ರಸ್ಟ್ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಸಹಯೋಗದಲ್ಲಿ ಬೆಳಿಗ್ಗೆ 09ರಿಂದ ಮದ್ಯಾಹ್ನ 03 ಗಂಟೆಯವರೆಗೆ ನಡೆಯುವ ಶಿಬಿರದಲ್ಲಿ ವಿಜಯಪುರದ ಅನುಗ್ರಹ ಕಣ್ಣಿನ ಆಸ್ಪತ್ರೆ ಮುಖ್ಯಸ್ಥ ಡಾ. ಪ್ರಭುಗೌಡ ಲಿಂಗದಳ್ಳಿ ಹಾಗೂ ಅವರ ತಂಡ ತಪಾಸಣೆ ನಡೆಸಲಿದೆ.

ಅರ್ಹ ರೋಗಿಗಳಿಗೆ ಉಚಿತವಾಗಿ ಕರೆದುಕೊಂಡು ಹೋಗಿ ಕಣ್ಣಿನ ಪೊರೆಯ ಶಸ್ತ್ರಚಿಕಿತ್ಸೆ ಮಾಡಿ ಕಳಿಸಲಾಗುವುದು. ಕೋರವಾರ ಸೇ–ರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಈ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಸಂಗಮೇಶ ಛಾಯಾಗೋಳ ಸಂಪರ್ಕ ಸಂಖ್ಯೆ:9742304565 ಹಾಗೂ ನಜೀರ್ ಚಾಂದಕವಟೆ ಸಂಪರ್ಕ ಸಂಖ್ಯೆ:7353515380 ಇವರನ್ನು ಸಂಪರ್ಕಿಸುವಂತೆ ಶಿಬಿರದ ಪ್ರಕಟಣೆ ತಿಳಿಸಿದೆ.

# “ಪ್ರೇಮದ ಪ್ರತೀಕ ಶ್ರೀರಾಮ”


**ಭಾವರಶ್ಮಿ**



– ವಿ.ಎಚ್.ಕೆ.ಹಿರೇಮಠ.

(“ನಮ್ಮ ಕಥಾ ಅರಮನೆ” ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**



ನಿಜ ಪ್ರೇಮದ ಪ್ರತೀಕ ಶ್ರೀ ರಾಮ ಎಂಬುದರಲ್ಲಿ ಎರಡು ಮಾತಿಲ್ಲ ಒಂದೇ ಒಂದು ವಾಕ್ಯದಲ್ಲಿ ಶ್ರೀ ರಾಮನ ಪ್ರೇಮದ ಪ್ರತೀಕವನ್ನ ಕಾಣಬಹುದು, ಅಳೆಯಬಹುದು,ಊಹೆಯನ್ನು ಮಾಡಬಹುದು ಅದುವೆ “ ರಾಮ ರಾಜ್ಯ “ ಎರಡೇ ಶಬ್ದ ಆ ಎರಡೇ ಶಬ್ದಗಳಲ್ಲಿ ಎಂತಹ ಮಾಧುರ್ಯ, ಎಂತಹ ಪ್ರೇಮ, ಎಂತಹ ಆಡಳಿತ ಇರಬಹುದು ಎಂಬುದನ್ನು ಕಲ್ಪಿಸಿಕೊಳ್ಳಬಹುದು ಅಥವಾ ಕಾಣಬಹುದು. ನಮ್ಮ ಜೀವಮಾನವಿಡೀ ಇದೇ ವಾಕ್ಯವನ್ನು ಕೇಳುತ್ತ ಬಂದಿರುವೆವು ಅಂದರೆ ಅದರಲ್ಲಿ ಎಂತಹ ಅರ್ಥ ಇದೆ ಅದು ಎಷ್ಟು ಪವಿತ್ರವಾದುದು ಎಂಬುದು ತಿಳಿಯುತ್ತದೆ.ನಮ್ಮ ದೇಶವನ್ನು “ ರಾಮ ರಾಜ್ಯ “ ಮಾಡುತ್ತೇವೆ. ಎಂಬುದನ್ನು ಕೇಳಿದ್ದೇವೆ.

ಈ ವಾಕ್ಯಕೆ ಪ್ರತೀಕ ಶ್ರೀ ರಾಮ ಎಂಬಂತೆ ಅವನ ಆಡಳಿತ ಮತ್ತು ರಾಮನ ನಡೆಯಲ್ಲಿ ನಾವು ಕಾಣಬಹುದು. ಶ್ರೀ ರಾಮ ಕಾಡಿಗೆ ಹೋದಾಗ ಶಬರಿ ಎಂಬ ವೃದ್ಧಯು ಗಿಡದಲ್ಲಿಯ ಬೋರೆ ಹಣ್ಣುಗಳನ್ನು ದಿನವು ಬಿಡಿಸಿ ಅವುಗಳ ರುಚಿ ನೋಡಿ ಸಿಹಿಯಾದ ಹಣ್ಣುಗಳನ್ನು ತನ್ನ ಬುಟ್ಟಿಯಲ್ಲಿ ತಗೆದಿರಿಸಿ ರಾಮ ಬರುವನೆಂದು ಕಾಯುತ್ತಾ ಕೂತಿರುತ್ತಾಳೆ ಒಂದು ದಿನ ಶ್ರೀ ರಾಮ ಅಲ್ಲಿಗೆ ಬಂದಾಗ ಶಬ–ರಿಯು ಭಕ್ತಿಯಿಂದ ತೆಗೆದಿರಿಸಿದ ಹಣ್ಣುಗಳನ್ನು ಶ್ರೀ ರಾಮನಿಗೆ ಕೊಡುವಳು.ಹಣ್ಣುಗಳನ್ನು ಅಷ್ಟೇ ಪ್ರೀತಿಯಿಂದ ಸ್ವೀಕರಿಸಿ ಸವಿಯುವನು. ಅದನ್ನು ಕಂಡ ಲಕ್ಷ್ಮಣ ಮುಜುಗರ ಪಡುವನು ಇದನ್ನರಿತ ಶ್ರೀ ರಾಮ ಭಕ್ತಿಯಲ್ಲಿ ಎಂಜಲು ಎಂಬುದು ಇರುವುದಿಲ್ಲ ನೀನು ಸವಿದು ನೋಡು ಹೇಗಿರುತ್ತವೆಯಂದು ಅಂದರೆ ಶ್ರೀ ರಾಮನಿಗೆ ಭಕ್ತರೆಂದರೆ ಪ್ರಜೆಗಳೆಂದರೆ ಅಷ್ಟೊಂದು ಪ್ರೀತಿಯು.



ನಿಷ್ಠಾವಂತ ರಾಮ ಕೈಕೆಯ ಕುತಂತ್ರದಿಂದ ರಾಜ್ಯದ ಪಟ್ಟಾಭಿಷೇಕ ತಪ್ಪಿದಾಗ ಕಿಂ–ಚಿತ್ತೂ ದುಃಖ ಪಡಲಿಲ್ಲ ಬೇಸರ ಮಾಡಿಕೊಳ್ಳದೆ ಸಂತೋಷದಿಂದ ತಂದೆಯ ವಾಕ್ಯ ಪರಿಪಾಲನೆ ತನ್ನ ಸೌಭಾಗ್ಯ ಎಂದುಕೊಂಡ ಶ್ರೀ ರಾಮ ಸಹೋದರ ಭರತನು ನೀನೆ ರಾಜನಾಗಬೇಕೆಂದು ಹಠ ಹಿಡಿದಾಗ ಒಪ್ಪದೆ ಪಿತೃ ವಾಕ್ಯ ಪರಿಪಾಲಕನಾಗುವನು. ಪ್ರಜೆಗಳಿಗೂ ತಿಳುವಳಿಕೆ ನೀಡಿ ತಾನು ಕಾಡಿಗೆ ಹೋಗುವ ಕಾರ್ಯ ಮುಂದುವರೆಸುವನು ಇದು ಎಲ್ಲರಿಗೂ ಅಸಾಧ್ಯ, ಬರುವುದಿಲ್ಲ. ಕೈಕೆಯ ಬಗ್ಗೆಯೂ ಬೇಸರಿಸಿಕೊಳ್ಳದೆ ಇರುವುದು, ಮಾತೆ ಕೌಶಲ್ಯಗೆ ಸಮಾಧಾನಿಸುವುದು ಶ್ರೀ ರಾಮನಲ್ಲಿ ಇರುವ ವಾತ್ಸಲ್ಯ ಗುಣಕ್ಕೆ ಹಿಡಿದ ಕನ್ನಡಿಯಾಗಿದೆ.

ಸೀತೆಯ ವಿಷಯದಲ್ಲೂ ಅಷ್ಟೇ ಶ್ರೀ ರಾಮ ಸೀತೆಯ ಅಪಹರಣವಾದ ಬಳಿಕ ಸೀತೆಯನ್ನು ಹುಡುಕುವವರೆಗೂ ವಿಶ್ರಮಿಸದೆ ಅನೇಕ ರಾಕ್ಷಸರೊಂದಿಗೆ ಸೆಣಸಾಡಿ ಎಂತಹ ಕಷ್ಟ ಬಂದರೂ ಸಹಿಸಿ ದೂ–ರಿಕರಿಸಿ ಅನೇಕ ಋಷಿ ಮುನಿಗಳಿಗೆ ಸಹಕರಿಸಿ ಹನುಮಂತನಂತಹ ಭಕ್ತನನ್ನು ಪಡೆದು ಎಲ್ಲರನ್ನೂ ಪ್ರೀತಿಸುವ ರಾಮ ಎಂದೂ ದ್ವೇಷ ಮೆರೆದವನಾಗಲಿಲ್ಲ. ರಾವಣನೊಡನೆ ಯುದ್ಧ ಮಾಡಿ ಸೀತೆಯನ್ನು ಪಡೆದು ಲಂಕೆಯನ್ನು ಗೆದ್ದ ಮೇಲೆ ರಾವಣನ ಸಹೋದರ ವಿಭೀಷಣನಿಗೆ ಪಟ್ಟಾಭಿಷೇಕ ಮಾಡಿಸುವನು, ಸವರ್ಣಭರಿತ ಸಾಮ್ರಾಜ್ಯ ಲಂಕೆ ತಾನು ಗೆದ್ದ ರಾಜ್ಯಕ್ಕೆ ತಾನೇ ರಾಜನಾಗಬಹುದಿತ್ತು. ಎಳ್ಳಷ್ಟು ಆಸೆ ಆಕಾಂಕ್ಷೆಗಳನ್ನು ಹೊಂದಿರದ ಶ್ರೀ ರಾಮ ವಿಭೀಷಣನಿಗೆ ರಾಜ್ಯ ಕಟ್ಟುವನು ಇದು ರಾಮನಲ್ಲಿರುವ ಪ್ರೀತಿ.

ಅಯೋಧ್ಯಗೆ ಮರಳಿದ ಶ್ರೀ ರಾಮ ಒಬ್ಬ ಸಾಮಾನ್ಯ ಪ್ರಜೆ ಸೀತಾ ಮಾತೆಯ ಕುರಿತು ಉಪೇಕ್ಷೆಯ ಮಾತನಾಡಿದಾಗ ಸೀತಾ ಮಾತೆಯನ್ನೇ ಕಾಡಿಗೆ ಕಳುಹಿಸಿದ ಅಂದರೆ ಒಬ್ಬ ಸಾಮಾನ್ಯ ಪ್ರಜೆಗೂ ಅಷ್ಟೇ ಹಕ್ಕು ರಾಜ್ಯದ ಮೇಲಿದೆ ಎಂಬುದನ್ನು ಸಾಬೀತು ಪಡಿಸಿದ ಶ್ರೀ ರಾಮ ದೈವೀ ಸಂಭೂತನಾಗಿದ್ದ ಯಾರಿಗೂ ಸುಖ ದುಃಖ ತಪ್ಪಿದ್ದಲ್ಲ ಎಂಬುದನ್ನು ಇಡೀ ಜಗತ್ತಿಗೆ ತಿಳಿಸಿದ ಪ್ರಭು ಶ್ರೀ ರಾಮ.

ಜೈ ಶ್ರೀ ರಾಮ

# ಬಿಜೆಪಿ ಅಲ್ಪಸಂಖ್ಯಾತ ಮೋರ್ಚಾ ಜಿಲ್ಲಾ ಉಪಾಧ್ಯಕ್ಷರಾಗಿ ಗೌಂಡಿ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ಪಟ್ಟಣದ ಹುಸೇನಸಾಬ್ ಗೌಂಡಿ ಬಿಜೆಪಿ ಅಲ್ಪಸಂಖ್ಯಾತ ಮೋರ್ಚಾದ ಜಿಲ್ಲಾ ಉಪಾಧ್ಯಕ್ಷರಾಗಿ ಹಾಗೂ ಮುಳಸಾವಳಗಿ ಗ್ರಾಮದ ದಾವಲಸಾಬ್ ಇನಾಮದಾರ ಅಲ್ಪಸಂಖ್ಯಾತ ಮೋರ್ಚಾದ ಜಿಲ್ಲಾ ಪ್ರಧಾನಕಾರ್ಯದರ್ಶಿಯಾಗಿ ನೇಮಕಗೊಂಡಿದ್ದಾರೆ.

ಪಕ್ಷದ ಸಂಘಟನಾತ್ಮಕ ದೃಷ್ಟಿಯಿಂದ ಮಾಜಿಶಾಸಕ ಸೋಮನಗೌಡ ಪಾಟೀಲ(ಸಾಸನೂರ) ಹಾಗೂ ಜಿಲ್ಲಾಧ್ಯಕ್ಷ ಆರ್.ಎಸ್.ಪಾಟೀಲ(ಕುಚಬಾಳ) ಸೂಚನೆಯ ಮೇರೆಗೆ ಇವರ ನೇಮಕ ಮಾಡಲಾಗಿದೆ ಎಂದು ಪಕ್ಷದ ಪ್ರಕಟಣೆ ತಿಳಿಸಿದೆ.

# ಜೈ ಹನುಮ

**ಉದಯರಶ್ಮಿ ದಿನಪತ್ರಿಕೆ**

**ಕಾವ್ಯರಶ್ಮಿ**

– ಶ್ರೀಕಾಂತ್ ಹರಿಹರಪುರ

(“ನಮ್ಮ ಕಥಾ ಅರಮನೆ” ಬರಹಗಾರರು)



ಕರೆದುಕೊಂಡು ಹೋಗೊ ಹನುಮ ರಾಮನೂರಿಗೆ
ಬಾಲ ರೂಪದಿಂದಿರುವ ನಮ್ಮ ಸ್ವಾಮಿಯೆಡೆಗೆ ॥ಪ॥

ರಾಮ ರಾಮ ರಾಮನೆಂದು ಬಿಡದೆ ಭಜಿಸುವೆ
ರಾಮ ನಾಮ ರೋಮದೊಳಗೂ ನಿಲಿಸಿಕೊಳ್ಳುವೆ
ರಾಮನಿಲ್ಲದಿಲ್ಲ ಎನ್ನ ಜಗವು ಎನ್ನುವೆ
ಕೌಸಲ್ಯಾ ಸುತ ರಾಮ ಕಾಣ ಬಯಸಿಹೆ...॥1॥

ರಾಮನಿಹನು ತುಂಬಾ ದೂರ ಎನ್ನಬೇಡವೋ
ರಾಮಭಂಟ ನಿನಗವನು ಸನಿಹವಲ್ಲವೇನೋ
ರಾಮ ರಾಮನೆನುತ ನಿನ್ನೊಡನೆ ಹೆಜ್ಜೆ ಹಾಕುವೆನೋ
ದಶರಥಾತ್ಮಜ ರಾಮನ ಕಾಣದೆ ನಾನಿಹೆನೋ...॥2॥

ರಾಮಗೆಂದು ರಾಮಫಲವ ನಾನು ತರುವೆನೋ
ರಾಮಗೆಂದು ರಾಮನೆನುತ ತುಳಸಿ ಕುಯ್ವೆನೋ
ರಾಮ ನಿನಗೆ ರಾಮಗೀತೆ ಹಾಡಿ ನಲಿವೆನೋ
ಲಕ್ಷಣಾಗ್ರಜ ರಾಮನ ಕಾಣಲೋಸುಗ ಇಹೆನೋ...॥3॥



ರಾಮ ನಾಮವೊಂದೇ ಎನಗೆ ಮಂತ್ರನೆನುವೆನೋ
ರಾಮ ನಾಮ ಪೇಳುತಲೇ ರಾಮನರ್ಚಿಪೆನೋ
ರಾಮ ನಾಮ ಅಂಬಾಸುತನ ಪ್ರಾಣ ಎನುವೆನೋ..
ಹನುಮ ನಿನ್ನ ಸ್ವಾಮಿ ಪಾದ ತೋರೋ ಎನುವೆನೋ..॥4॥

# ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಆದ್ಯತೆ ನೀಡಿ :ಬಬಲಾದ



ಉದಯರಶ್ಮಿ ನ್ಯೂಸ್

ಇಂಡಿ: ಮಕ್ಕಳನ್ನು ಪ್ರ□ತಿಸುವ ಪ್ರವೃತ್ತಿ ಪಾಲಕರು ಹಾಗೂ ಶಿಕ್ಷಕರಲ್ಲಿ ಆರಂಭವಾದಾಗಲೇ ಮಕ್ಕಳಲ್ಲಿ ಪ್ರಗತಿ ಕಾಣಲು ಸಾಧ್ಯ ಎಂದು ಪಿಡಿಓ ಬಸವರಾಜ ಬಬಲಾದ ಹೇಳಿದರು.

ಅವರು ತಾಲೂಕಿನ ಹಿರೇರೂಗಿ ಗ್ರಾಮದ ಕೆಬಿಎಸ್, ಕೆಜಿಎಸ್ ಶಾಲೆಯ ವತಿಯಿಂದ ಹಮ್ಮಿಕೊಂಡ ಸಿರಿ ಸಂಭ್ರಮ-ಶಾಲಾ ವಾರ್ಷಿಕೋತ್ಸವ ಹಾಗೂ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಪಾಲಕರು ಮಕ್ಕಳ ಅಭ್ಯಾಸದ ಕಡೆ ಗಮನಿಸಬೇಕು. ಅವರನ್ನು ಧನಾತ್ಮಕವಾಗಿ ಪ್ರೊ□ತ್ಸಾಹಿಸಬೇಕು. ಟಿವಿ ಮತ್ತು ಮೊಬೆ□ಲ್ ಗಳಿಂದ ಮಕ್ಕಳನ್ನು ದೂರವಿಟ್ಟು ಪ್ರತಿದಿನ ಶಾಲೆಗೆ ಕಳುಹಿಸಬೇಕು ಎಂದರು.

ಶಿಕ್ಷಕ ಸಂತೋಷ ಬಂಡೆ ಮಾತನಾಡಿ, ಮಾನವನ ಸರ್ವಾಂಗೀಣ ಪ್ರಗತಿಗೆ ಶಿಕ್ಷಣ ಮುಖ್ಯ. ಕಠಿಣ ಪರಿಶ್ರಮ, ಪ್ರಾಮಾಣಿಕತೆಯಿಂದ ಮಕ್ಕಳು ಅಭ್ಯಸಿಸಬೇಕು. ನಮ್ಮ ನಾಗರಿಕತೆಯ ಶ್ರೀಮಂತ ಪರಂಪರೆ ಮತ್ತು ಮೌಲ್ಯಗಳನ್ನು ಇಂದಿನ ಪೀಳಿಗೆ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಮುಖ್ಯ ಶಿಕ್ಷಕ ಅನಿಲ ಪತಂಗಿ, ಶಿಕ್ಷಕಿ ಎಸ್ ಡಿ ಬಿರಾದಾರ ವರದಿ ವಾಚಿಸಿದರು.

ಪಿಡಿಓ ಬಸವರಾಜ ಬಬಲಾದ, ಯುವ ಮುಖಂಡರಾದ ಪರಶುರಾಮ ಹೊಸಮನಿ, ಸಂತೋಷ ಕೋಟಗೊಂಡ ಅವರನ್ನು ಶಾಲೆಯ ವತಿಯಿಂದ ಸನ್ಮಾನಿಸಲಾಯಿತು.

ಶಿಕ್ಷಕ ಎಸ್ ಆರ್ ಚಾಳೇಕರ ಕಾರ್ಯಕ್ರಮ ನಿರ್ವಹಿಸಿದರು.

ಎಸ್ ಡಿ ಎಂ ಸಿ ಅಧ್ಯಕ್ಷರಾದ ಮಾಳಪ್ಪ ಪೂಜಾರಿ, ಸುದರ್ಶನ ಬೇನೂರ, ಉಪಾಧ್ಯಕ್ಷರಾದ ಪರಶುರಾಮ ಹೊಸಮನಿ, ಸದಸ್ಯ ಜಟ್ಟೆಪ್ಪ ಮರಡಿ ಹಾಗೂ ಎಸ್ ಡಿ ಎಂ ಸಿ ಎಲ್ಲ ಸದಸ್ಯರು ಮತ್ತು ಮುಖ್ಯ ಶಿಕ್ಷಕರಾದ ವ್ಹಿ ವೈ ಪತ್ತಾರ, ಎ ಎಂ ಬೆದ್ರೇಕರ, ಶಿಕ್ಷಕರಾದ ಎಸ್ ಎಂ ಪಂಚಮುಖಿ, ಎಸ್ ಬಿ ಕುಲಕರ್ಣಿ, ಜೆ ಎಂ ಪತಂಗಿ, ಸಾವಿತ್ರಿ ಸಂಗಮದ, ಎಸ್ ಎನ್ ಡಂಗಿ, ಎಫ್ ಎ ಹೊರ್ತಿ, ಜೆ ಸಿ ಗುಣಕಿ, ಎಸ್ ವ್ಹಿ ಬೇನೂರ, ಶಾಂತೇಶ ಹಳಗುಣಕಿ ಸೇರಿದಂತೆ ಶಾಲೆಯ ಎಲ್ಲ ಶಿಕ್ಷಕರು, ಮಕ್ಕಳು ಭಾಗವಹಿಸಿದ್ದರು.

ವಿವಿಧ ಸ್ಪರ್ಧೆಯಲ್ಲಿ ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು.

## ಅನಾರೋಗ್ಯದಿಂದ ಅಸ್ವಸ್ಥಗೊಂಡ ಅಪರಿಚಿತ ವಯೋವೃದ್ಧನನ್ನು ಆಸ್ಪತ್ರೆಗೆ ಸಾಗಿಸಿದ ಕರವೇ ಅಧ್ಯಕ್ಷ

# ಮಾನವೀಯತೆ ಮೆರೆದ ಅಶೋಕ ಹಾರಿವಾಳ

ಉದಯರಶ್ಮಿ ನ್ಯೂಸ್

- ಬಸವರಾಜ ನಂದಿಹಾಳ

ಬಸವನಬಾಗೇವಾಡಿ: ಪಟ್ಟಣದ ಸಮೀಪವಿರುವ ಬಸವನಹಟ್ಟಿ ಕ್ರಾಸಿನ ಬಸ್ತಂಗುದಾಣದಲ್ಲಿ ಕಳೆದ ಮೂರು ದಿನಗಳಿಂದ ಅನಾರೋಗ್ಯದಿಂದ ಅಸ್ವಸ್ಥಗೊಂಡ ಅಪರಿಚಿತ ವಯೋವೃದ್ಧನನ್ನು ಅಂಬ್ಯುಲೆನ್ಸ್ ಸಿಬ್ಬಂದಿಗಳ ಸಹಾಯದಿಂದ ಸರ್ಕಾರಿ ಆಸ್ಪತ್ರೆಗೆ ಸಾಗಿಸಿ ಒರ್ವ ವಯೋವೃದ್ಧನ ಜೀವ ಕಾಪಾಡಿದ ಮಾನವೀಯ ಘಟನೆ ಗುರುವಾರ ಜರುಗಿದೆ.

ಕಳೆದ ಮೂರು ದಿನಗಳಿಂದ ಅಪರಿಚಿತ ಸುಮಾರು 62 ವರ್ಷದ ವೃದ್ಧ ಬಸವನಹಟ್ಟಿ ಕ್ರಾಸಿನ ಬಸ್ ತಂಗುದಾಣದಲ್ಲಿದ್ದಾರೆ. ಇದನ್ನು ಗಮನಿಸಿದ ಬಸ್ ತಂಗುದಾಣದ ಹತ್ತಿರ ತೋಟದ ನಿವಾಸಿ ಅಸ್ತಾಪ ಬಾಗವಾನ ಅವರು ಸೇರಿದಂತೆ ಇತರರು ವೃದ್ಧನಿಗೆ ಆಹಾರ, ನೀರು, ಜ್ಯೂಸ್ ನೀಡಿದ್ದಾರೆ. ತೀವ್ರ ಅನಾರೋಗ್ಯದಿಂದ ಅಸ್ವಸ್ಥಗೊಂಡ ವೃದ್ಧ ನಿತ್ರಾಣವಾಗಿ ಮಲಗಿಕೊಂಡಿದ್ದಾನೆ. ವಿಪರೀತ ಬಿಸಿಲಿನ ತಾಪವು ವೃದ್ಧನನ್ನು ಹೈರಾಣ ಮಾಡಿದೆ. ಇದನ್ನು ಕಂಡ ಅಸ್ತಾಪ ಬಾಗವಾನ ಅವರು ಕರ್ನಾಟಕ ರಕ್ಷಣಾ ವೇದಿಕೆಯ ಯುವ ಘಟಕದ ಅಧ್ಯಕ್ಷ ಅಶೋಕ ಹಾರಿವಾಳ ಅವರಿಗೆ ದೂರವಾಣಿ ಕರೆ ಮಾಡಿ ಈ ವಿಷಯ ತಿಳಿಸಿದ್ದಾರೆ.

ವಿಷಯ ತಿಳಿದ ತಕ್ಷಣವೇ ಅಶೋಕ ಹಾರಿವಾಳ ಅವರು ಸ್ಥಳಕ್ಕೆ




ಬಂದು ತೀವ್ರ ಬಳಲಿದ ವೃದ್ಧನನ್ನು ನೋಡಿ ತಕ್ಷಣವೇ ಅಂಬ್ಯುಲೆನ್ಸ್ಗೆ ಕರೆ ಮಾಡಿ ಅನಾರೋಗ್ಯದಿಂದ ನಿತ್ರಾಣಗೊಂಡ ವೃದ್ಧನನ್ನು ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗೆ ಕಳುಹಿಸಿಕೊಟ್ಟರು.

ಈ ಸಂದರ್ಭದಲ್ಲಿ ಕರವೇ ಕಾರ್ಯಕರ್ತರಾದ ಶ್ರೀಶೈಲ ಮದರಕಿ, ಪರಶು ಒಡೆಯರ,ಅಸ್ತಾಪ ಬಾಗವಾನ ಇದ್ದರು. ತಾಲೂಕು ಸರ್ಕಾರಿ ಆಸ್ಪತ್ರೆಯಲ್ಲಿ ವೃದ್ಧನಿಗೆ ಪ್ರಾಥಮಿಕ ಚಿಕಿತ್ಸೆ ನೀಡಿದ ನಂತರ ಜಿಲ್ಲಾಸ್ಪತ್ರೆಯಲ್ಲಿ ಮುಂದಿನ ಚಿಕಿತ್ಸೆ ಕರೆದುಕೊಂಡು ಹೋಗಲಾಯಿತು.

ಅಶೋಕ ಹಾರಿವಾಳ ಅವರನ್ನು ದೂರವಾಣಿ ಮೂಲಕ ಶುಕ್ರವಾರ ಪತ್ರಿಕೆ ಸಂಪರ್ಕಿಸಿದಾಗ, ಬಸವನಹಟ್ಟಿ ಕ್ರಾಸಿನಲ್ಲಿರುವ ಬಸ್ ತಂಗುದಾಣದಲ್ಲಿ ಒರ್ವ ವೃದ್ಧನು ಅನಾರೋಗ್ಯದಿಂದ ತೀವ್ರವಾಗಿ ಬಳಲುತ್ತಿದ್ದಾನೆ ಎಂಬುವದು ಗೊತ್ತಾಯಿತು. ತಕ್ಷಣವೇ ನಾನು ಸ್ಥಳಕ್ಕೆ ಹೋಗಿ ಇದರ ಬಗ್ಗೆ ತಾಲೂಕಾ ವೈದ್ಯಾಧಿಕಾರಿ ಡಾ.ಎಸ್.ಎಸ್.ಓತಗೇರಿ ಅವರ ಗಮನಕ್ಕೆ ತಂದಾಗ ತಕ್ಷಣವೇ ಅವರು ಅಂಬ್ಯುಲೆನ್ಸ್ ಕಳುಹಿಸಿ ವೃದ್ಧನಿಗೆ ಸೂಕ್ತ ಚಿಕಿತ್ಸೆ ಸಿಗುವಂತೆ ಮಾಡಿದರು. ಈ ವೃದ್ಧನ ಹೆಸರು, ಊರು ಗೊತ್ತಾಗಿಲ್ಲ. ಯಾರಾದರೂ ಇವರ ಸಂಬಂಧಿಕರು ಇದ್ದರೆ ಜಿಲ್ಲಾಸ್ಪತ್ರೆಗೆ ಹೋಗಬಹುದು. ಈಗ ವೃದ್ಧನು ಚೇತರಿಸಿಕೊಳ್ಳುತ್ತಿದ್ದಾನೆ ಎಂದು ಗೊತ್ತಾಗಿದ್ದು. ವೃದ್ಧನು ಇನ್ನೂ ಮಾತನಾಡುವ ಸ್ಥಿತಿಯಲ್ಲಿ ಇಲ್ಲ ಎಂದು ಗೊತ್ತಾಗಿದೆ. ಇದರಿಂದ ಅವರ ಬಗ್ಗೆ ಹೆಚ್ಚು ಮಾಹಿತಿ ಸಿಕ್ಕಿಲ್ಲ ಎಂದು ಹೇಳಿದರು.

## ಜೆಎಸ್ಎಸ್ ಆಸ್ಪತ್ರೆಯಲ್ಲಿ ನಡೆದ ವಿಶೇಷ ಸಂವಾದದಲ್ಲಿ ಡಾ.ನವೀನ ಪಟ್ಟಣಶೆಟ್ಟಿ ಅಭಿಮತ

# ಅಂಗಾಂಗಳನ್ನು ದಾನ ಮಾಡಿ ಸತ್ತ ಮೇಲೂ ಬದುಕಿ

ಉದಯರಶ್ಮಿ ನ್ಯೂಸ್

ವಿಜಯಪುರ: ಸತ್ತಂತೆ ಬದುಕುವುದಕ್ಕಿಂತ ಸತ್ತ ಮೇಲೂ ಬದುಕುವುದು ನಿಜವಾದ ಬದುಕಾಗಿದ್ದು ಆ ಕಾರ್ಯ ಆಗಬೇಕಾದಲ್ಲಿ ಅಂಗಾಂಗಗಳನ್ನು ದಾನ ಮಾಡುವುದೊಂದೆ ಮಾರ್ಗವಾಗಿದೆ. ಸತ್ತ ಮೇಲೆ ಮಣ್ಣಾಗುವ ಈ ಶರೀರದಿಂದ ಸಾಯುವ ಅಂಚಿನಲ್ಲಿರುವ ಜೀವಗಳಿಗೆ ಬದುಕು ನೀಡಬಹುದು ಎಂದು ಮೂತ್ರಪಿಂಡಗಳ ಕಸಿ ತಜ್ಞರಾದ ಡಾ.ನವೀನ ಪಟ್ಟಣಶೆಟ್ಟಿ ಹೇಳಿದರು.

ನಗರದ ಜ್ಞಾನಯೋಗಿ ಶ್ರೀ ಸಿದ್ಧೇಶ್ವರ ಸ್ವಾಮೀಜಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ವಿಶ್ವ ಕಿಡ್ನಿ ದಿನದ ಪ್ರಯುಕ್ತ ಆಯೋಜಿಸಲಾಗಿದ್ದ ಸಂವಾದ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು; ಹುಟ್ಟಿದ ಪ್ರತಿಯೊಬ್ಬ ಮನುಷ್ಯ ಸಾಯಲೇ ಬೇಕು ಎನ್ನುವುದು ನಿಸರ್ಗದ ನಿಯಮವಾಗಿದೆ. ಆ ನಿಯಮದ ಪ್ರಕಾರ ಪ್ರತಿನಿತ್ಯವೂ ಸಾಕಷ್ಟು ಜನ ಪ್ರಾಣ ಬಿಡುತ್ತಿದ್ದಾರೆ. ಆದರೆ ಸತ್ತ ಮೇಲೆ ಮತ್ತೊಮ್ಮೆ ಬದುಕಿ ಉಳಿಯಬೇಕಾದರೆ ಅದಕ್ಕಿರುವ ಏಕೈಕ ಮಾರ್ಗವೆಂದರೆ ಅದು ಅಂಗಾಂಗ ದಾನವಾಗಿದೆ. ಕೆಲವು ಸಂದರ್ಭಗಳಲ್ಲಿ ಸಂಭವಿಸುವ ವೃತ್ಯುವಿನಿಂದ ವ್ಯಕ್ತಿಯು ನಮ್ಮನ್ನು ಅಗಲಿ ಹೋಗುತ್ತಾರೆ.

ಆದರೆ ಅವರಿಗೆ ತಮ್ಮ ದೇಹದ ಭಾಗಗಳಿಂದ ಇನ್ನೊಬ್ಬರ ಜೀವವನ್ನು ಉಳಿಸಬಹುದು ಎನ್ನುವುದರ ಕುರಿತು ಮನದಟ್ಟು ಮಾಡಿಕೊಟ್ಟರೆ ಸಾವುಗಳು ಕೂಡ ಸಾರ್ಥಕತೆ ಪಡೆದುಕೊಳ್ಳುತ್ತವೆ. ಅದರಲ್ಲೂ ಮೂ□□□□□□ಪಿಂಡಗಳ ವೈಫಲ್ಯದಿಂದ ಸಾವನ್ನಪ್ಪುವುದನ್ನು ತಡೆಯುವುದಕ್ಕೆ ಎರಡು ಮಾರ್ಗಗಳಿದ್ದು, ಒಂದು ಹತ್ತಿರದ ರಕ್ತ ಸಂಬಂಧಿಗಳು ಸ್ವಯಂಪ್ರೇರಿತವಾಗಿ ತಮ್ಮ ಮನೆಯಲ್ಲಿ ಕಿಡ್ನಿ ವೈಫಲ್ಯಕ್ಕೊಳಗಾದ ವ್ಯಕ್ತಿಗೆ ಕಿಡ್ನಿ ದಾನ ಮಾಡಬಹುದು. ಹಾಗೂ ಇನ್ನೊಂದು ಸರ್ಕಾರ ನಿಯಮಿಸಿದ ಕೇಂದ್ರದಡಿಯಲ್ಲಿ ಅಪಘಾತ ಹಾಗೂ ಅಸಹಜ ಸಾವುಗಳಿಂದ

JSS HOSPITALS
REDEFINING HEALTHCARE

ಮೃತ ವ್ಯಕ್ತಿಯ ಆಸೆಯಂತೆ ಅಥವಾ ಅವರ ಸಂಬಂಧಿಕರ ಒಪ್ಪಿಗೆಯಂತೆ ಸಿಗುವ ಕಿಡ್ನಿಗಳಿಂದ ಕಿಡ್ನಿ ವೈಫಲ್ಯಕ್ಕೊಳಗಾದ ರೋಗಿಗಳ ಬದುಕನ್ನು ಬದಲಿಸಬಹುದು. ಆದರೆ ಇದರ ಕುರಿತಾಗಿ ಬಹಳ ಜನಗಳಿಗೆ ತಿಳುವಳಿಕೆ ಇಲ್ಲದಂತಾಗಿದೆ. ಹೀಗಾಗಿ ನಮ್ಮ ದೇಶದಲ್ಲಿ ಒಂದು ದಿನಕ್ಕೆ ಅರವತ್ತು ಕಿಡ್ನಿ ಕಸಿಗಳು ನಡೆದರೆ



ಸರಿ ಸುಮಾರು ಹತ್ತೊಂಬತ್ತು ಪ್ರಕರಣಗಳಲ್ಲಿ ಕಿಡ್ನಿ ಸಿಗದೇ ಸಾವನ್ನಪ್ಪುತ್ತಿದ್ದಾರೆ. ಮತ್ತೆ ಕೆಲವರಲ್ಲಿ ಧಾರ್ಮಿಕ ಆಚರಣೆ ಹೆಸರಿನಲ್ಲಿ ಕಿಡ್ನಿ ನೀಡಿದರೆ ಸ್ವರ್ಗ ಸಿಗುವುದಿಲ್ಲ, ಮುಕ್ತಿ ಸಿಗುವುದಿಲ್ಲ ಎಂದುಕೊಂಡು ಅಂಗಾಂಗ ದಾನ ಮಾಡುವುದಕ್ಕೆ ಹಿಂದೇಟು ಹಾಕುತ್ತಾರೆ. ಇದು ಶುದ್ಧ ತಪ್ಪಾಗಿದ್ದು ಜನರು ಆ ಮೂಢ ನಂಬಿಕೆಗಳು ಹಾಗೂ ಅರ್ಥವಿದಲ್ಲಿದ ಆಚರಣೆಗಳಿಂದ ಹೊರ ಬಂದು ಪರೋಪಕಾರಕ್ಕೆ ತೆರೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮವನ್ನುದ್ದೇಶಿಸಿ ಜೆ-ಎಸ್ಎಸ್ ಆಸ್ಪತ್ರೆಯ ಇನ್ನೋರ್ವ ಕಿಡ್ನಿ ಕಸಿ ತಜ್ಞ ಡಾ.ರಾಕೇಶ ಪಾಟೀಲ ಮಾತನಾಡಿ, ಮೊದಲು ಕಿಡ್ನಿ ಕಸಿ ಮಾಡಿಸಿಕೊಳ್ಳುವುದು ಎಂದರೆ ಬೇರೆ ಬೇರೆ ನಗರಗಳಿಗೆ ತೆರಳಿ ದುಬಾರಿ ಹಣ ತೆರಬೇಕಾಗುತ್ತಿತ್ತು. ಆದರೆ ಇಂದು ಜೆಎಸ್ಎಸ್ ಆಸ್ಪತ್ರೆಯಲ್ಲಿ ಅತ್ಯಂತ ಕಡಿಮೆ ದರದಲ್ಲಿ ಟ್ರಾನ್ಸಪ್ಲಾಂಟ್ ಮಾಡಲಾಗುತ್ತಿದೆ. ಈಗಾಗಲೇ ಎರಡು ಯಶಸ್ವಿ ಟ್ರಾನ್ಸ್ಪಾಂಟ ಮಾಡಲಾಗಿದ್ದು ಮುಂದಿನ ದಿನಗಳಲ್ಲಿ ದಾಖಲೆಯ ಪ್ರಮಾಣದಲ್ಲಿ ಇಂಥ ಶಸ್ತ್ರಚಿಕಿತ್ಸೆಗಳನ್ನು ಕೈಗೊಳ್ಳುವ ಗುರಿ ಹೊಂದಲಾಗಿದೆ. ಜನ ಸಾಮಾನ್ಯರಿಗೆ ಕೈಗೆಟುಕುವ ದರದಲ್ಲಿ ಟ್ರಾನ್ಸಪ್ಲಾಂಟ್ ಮಾಡುವ ಮೂಲಕ ಆಸ್ಪತ್ರೆಯ ಹೆಸರನ್ನು ಹೆಚ್ಚಿಸುವ ಗುರಿ ನಮ್ಮದಾಗಿದ್ದು ಇದಕ್ಕೆ ಪೂಜ್ಯರ ಆಶೀರ್ವಾದ ಸದಾ ಇದ್ದೇ ಇರುತ್ತದೆ ಎಂದು ಹೇಳಿದರು.

ಅಲ್ಲದೇ ಕಿಡ್ನಿ ಟ್ರಾನ್ಸ್ಪಾಂಟ್ ನಂತರದಲ್ಲಿ ಕಿಡ್ನಿ ನೀಡಿದವರಿಗೂ ಹಾಗೂ ಪಡೆದುಕೊಂಡವರಿಗೂ ಯಾವುದೇ ರೀತಿಯ ಸಮಸ್ಯೆಯಾಗುವುದಿಲ್ಲ. ಎಲ್ಲರಂತೆ ಸಾಮಾನ್ಯ ಜೀವನವನ್ನು ನಡೆಸಬಹುದಾಗಿದ್ದು ಇದರ ಕುರಿತು ಅರಿವು ಮೂಡಿಸುವ ಕಾರ್ಯವಾಗಬೇಕಿದೆ ಎಂದು ಹೇಳಿದರು.

ಕಾರ್ಯಕ್ರಮವಲ್ಲಿ ನೂರಾರು ಡಯಾಲಿಸಿಸ್ ರೋಗಿಗಳು ಪಾಲ್ಗೊಂಡು ತಮ್ಮ ಅನುಭವವನ್ನು ಹಂಚಿಕೊಳ್ಳುವುದರೊಂದಿಗೆ ಹಲವಾರು ಪ್ರಶ್ನೆಗಳನ್ನು ಕೇಳುವ ಮೂಲಕ ತಮ್ಮ ಅನುಮಾನಗಳನ್ನು ನೀಗಿಸಿಕೊಂಡರು.

ಎರಡು ಯಶಸ್ವಿ ಕಿಡ್ನಿ ಟ್ರಾನ್ಸಪ್ಲಾಂಟ್‌ನಲ್ಲಿ ಭಾಗವಹಿಸಿದ ಸರ್ವ ಸಿಬ್ಬಂದಿ ವರ್ಗದವರನ್ನು ಈ ಸಂದರ್ಭದಲ್ಲಿ ಸತ್ಕರಿಸಲಾಯಿತು.

ಈ ಸಂವಾದ ಕಾರ್ಯಕ್ರಮದಲ್ಲಿ ಆಸ್ಪತ್ರೆಯ ಎಲ್ಲ ವೈದ್ಯರು ಹಾಗೂ ಸಿಬ್ಬಂದಿವರ್ಗ ಭಾಗವಹಿಸಿದ್ದರು.

# ಬಿಜೆಪಿ ಮಂಡಲ ಅಧ್ಯಕ್ಷ ಸಂತೋಷ ಪಾಟೀಲಗೆ ಸನ್ಮಾನ

ಉದಯರಶ್ಮಿ ನ್ಯೂಸ್



ಸಿಂದಗಿ: ಹುದ್ದೆ ಯಾವುದೇ ಇದ್ರು ಸಮಾಜದ ಕಾರ್ಯಕ್ಕಾಗಿ ಸದಾ ಸ್ಪಂದಿಸುತ್ತೇನೆ ಎಂದು ನೂತನ ಮಂಡಲದ ಅಧ್ಯಕ್ಷ ಸಂತೋಷ ಪಾಟೀಲ ಡಂಬಳ ಹೇಳಿದರು.

ಪಟ್ಟಣದ ಡೈಮಂಡ್ ಬ್ಯಾಂಕ್ ಸಭಾಂಗಣದಲ್ಲಿ ತಾಲೂಕು ಪಂಚಮಸಾಲಿ ಸಮಾಜದ ವತಿಯಿಂದ ಹಮ್ಮಿಕೊಂಡ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಪಕ್ಷ ನಿಷ್ಠೆ, ವೃತ್ತಿ ನಿಷ್ಠೆ ಹಾಗೂ ಸಮಾಜ ಪರ ಚಿಂತನೆಗಳು ನಮ್ಮನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ಯುತ್ತವೆ. ನಾವು ಹುದ್ದೆಗಾಗಿ ಬಡಿದಾಡದೆ ನಿಷ್ಠೆಯಿಂದ ನಮ್ಮ ಕಾರ್ಯಗಳನ್ನು ನಾವು ಜವಾಬ್ದಾರಿಯಿಂದ ಮಾಡುತ್ತಾ ಹೋದರೆ ಹುದ್ದೆಗಳೇ ನಮ್ಮನ್ನು ಹುಡುಕಿಕೊಂಡು ಬರುತ್ತವೆ. ಕಾರಣ ನಾವು ಯಾರೇ ಇರಲಿ ನಮ್ಮ ನಮ್ಮ ಕರ್ತವ್ಯಗಳನ್ನು ನಿಷ್ಠೆಯಿಂದ ಪಾಲಿಸೋಣ ಎಂದರು.

ಇದೇ ಸಂದರ್ಭದಲ್ಲಿ ಸಮಾಜದ ತಾಲೂಧ್ಯಕ್ಷ ಎಂ.ಎಂ. ಹಂಗರಗಿ, ಅಧ್ಯಕ್ಷತೆ ವಹಿಸಿದ್ದ ವ್ಹಿ.ಬಿ ಕುರುಡೆ ಮಾತನಾಡಿ, ಪಾಟೀಲ ಅವರು ಸದಾ ಕ್ರಿಯಾಶೀಲ ವ್ಯಕ್ತಿ. ಸಮಾಜ ಮುಖಿಯಾಗಿ ಎಲ್ಲರೊಂದಿಗೂ ಬೆರೆಯುವ ಸರಳ ವ್ಯಕ್ತಿತ್ವವನ್ನು ಹೊಂದಿದ್ದಾರೆ. ಜವಾಬ್ದಾರಿಗಳನ್ನು ನಿಭಾಯಿಸುವ ಸಾಮರ್ಥ್ಯವನ್ನು ಕಂಡು ಪಕ್ಷ ಅವರಿಗೆ ಮಂಡಲದ ಅಧ್ಯಕ್ಷ ಸ್ಥಾನ ನೀಡಿದೆ. ಕೊಟ್ಟ ಜವಾಬ್ದಾರಿಯನ್ನು ಸಂತೋಷ ಅವರು ಪ್ರಾಮಾಣಿಕವಾಗಿ ನಿಷ್ಠೆಯಿಂದ ನಿಭಾಯಿಸಿ ಪಕ್ಷ ಕೊಟ್ಟ ಜವಾಬ್ದಾರಿಗೆ ಗೌರವವನ್ನು ತಂದು ಕೊಡಲಿ ಅಲ್ಲದೆ ಮುಂದಿನ ದಿನಮಾನಗಳಲ್ಲಿ ಅವರು ರಾಜ್ಯ ಮಟ್ಟದ ಹುದ್ದೆಗಳನ್ನು ಅಲಂಕರಿಸಲಿ ಎಂದು ಶುಭ ಹಾರೈಸಿದರು.

ಇದೇ ಸಂದರ್ಭದಲ್ಲಿ ನೂತನ ಬಿಜೆಪಿ ಪಕ್ಷದ ಮಾಧ್ಯಮ ಸಂಚಾಲಕರಾಗಿ ಆಯ್ಕೆಯಾದ ಎಸ್.ಎನ್. ಹಿರೇಮಠ ಅವರನ್ನು ಸನ್ಮಾನಿಸಲಾಯಿತು.

ಈ ವೇಳೆ ಸಮಾಜದ ಕಾರ್ಯದರ್ಶಿ ಆನಂದ ಶಾಬಾದಿ, ಚಂದ್ರಶೇಖರ ನಾಗರಬೆಟ್ಟ, ಗುರು ಬಸರಕೋಡ, ಎಂ.ಎಸ್ ರುದ್ರಗೌಡರ್, ಶ್ರೀಶೈಲ್ ಚಳ್ಳಗಿ, ಆರ್.ಆರ್.ಪಾಟೀಲ ಮಲ್ಲಿಕಾರ್ಜುನ ಅಲ್ಲಾಪುರ್, ಶಿವಾನಂದ್ ಸಬರದ, ಕಸಾಪ ತಾಲೂಕಾಧ್ಯಕ್ಷ ಶಿವಾನಂದ ಬಡಾನೂರ, ಪಂಡಿತ ಯಂಪುರೆ, ಶಂಕರಗೌಡ ಬಿರಾದಾರ ಸೇರಿದಂತೆ ಹಲವರಿದ್ದರು.

# ವಿದ್ಯುತ್ ಕಂಬ ಸ್ಥಳಾಂತರಿಸಲು ರೈತ ಸಂಘ ಆಗ್ರಹ

ಉದಯರಶ್ಮಿ ನ್ಯೂಸ್




ವಿಜಯಪುರ: ಜಿಲ್ಲೆಯಲ್ಲಿ ವಿದ್ಯುತ್ ಇಲಾಖೆ ಹಾಗೂ ಅರಣ್ಯ ಇಲಾಖೆಯ ನಿರ್ಲಕ್ಷದಿಂದ ಹಾಗೂ ನಿಷ್ಕಾಳಜಿಯಿಂದ ಸರಕಾರದ ತೆರಿಗೆ ಹಣವನ್ನು ವ್ಯರ್ಥ ಹಾಳುಮಾಡುತ್ತಿದ್ದು ಸರಿಯಾದ ಯೋಜನೆಯಿಲ್ಲದೇ ವಿದ್ಯುತ್ ಕಂಬದ ಕೆಳಗೆ ಗಿಡಗಳು ಹಚ್ಚಿರುವುದರಿಂದ ವಾಯರ್‌ಗಳ ಮಧ್ಯ ಗಿಡದ ಕೊಂಬೆ ಬಂದು ಗಾಳಿಗೆ ಒಂದಕ್ಕೊಂದು ತಾಗಿ ಶಾರ್ಟ ಸರ್ಕಿಟ್ ಆಗಿ ಅನೇಕ ಬಾರಿ ಸಮಸ್ಯೆಗಳಾಗಿವೆ. ಇದನ್ನು ಕೂಡಲೇ ಸಂಬಂಧಿಸಿದ ಅಧಿಕಾರಿಗಳಿಗೆ ಆದೇಶ ಮಾಡುವಂತೆ ಆಗ್ರಹಿಸಿ ರೈತಸಂಘದಿಂದ ಅಪರ ಜಿಲ್ಲಾಧಿಕಾರಿ ಮಹದೇವ ಮುರಗಿ ಅವರಿಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಅವರು ಮನವಿ ಸಲ್ಲಿಸಿ ಮಾತನಾಡಿ, ಜೋರಾದ ಗಾಳಿ ಹಾಗೂ ಮಳೆ ಬಂದಾಗ ಗಿಡಗಳ ಎಲೆಗಳು ವಿದ್ಯುತ್ ಕಂಬದ ವಾಯರಗಳು ಒಂದಕ್ಕೊಂದು ತಾಗಿ ಶಾರ್ಟ ಸರ್ಕಿಟ್ ಆಗಿ ವಾರಗಟ್ಟಲೆ ವಿದ್ಯುತ್ ಹೋಗಿರುವ ಉದಾಹರಣೆಗಳಿವೆ. ಇದರಂತೆ ರೈತರಿಗೆ ಹಾಗೂ ಸಾರ್ವಜನಿಕರಿಗೂ ಅನೇಕ ಸಮಸ್ಯೆಗಳು ಆಗಿರುವುದು ಇದೆ. ಈ ಕುರಿತು ಅನೇಕ ಬಾರಿ ಅಧಿಕಾರಿಗಳಿಗೆ ಮನವಿ ಮಾಡಿದರೂ ಅಧಿಕಾರಿಗಳು ತಲೆ ಕೆಡಿಸಿಕೊಳ್ಳದೇ ಜಾರಿಕೊಳ್ಳುತ್ತಿದ್ದಾರೆ.

ನಾಗಠಾಣ □ ಜಂಬಗಿ ಹೋಗುವ ಸುಮಾರು 8 ಕಿ.ಮೀ ವರೆಗೆ ರಸ್ತೆಯ ಮಾರ್ಗದಲ್ಲಿ ವಿದ್ಯುತ್ ಕಂಬದ ನೇರವಾಗಿ ಕೆಳಗಡೆ ಗಿಡಗಳು ಎತ್ತರಕ್ಕೆ ಬೆಳೆದು ಕರೆಂಟ್ ವಾಯರಗಳ ಮೇಲೆ ಹಾದು ಹೋಗಿವೆ. ಇದರಿಂದ ಅನೇಕ ಬಾರಿ ವಿದ್ಯುತ್ ಅವಘಡಗಳು ಸಂಭವಿಸಿವೆ. ಇಲಾಖೆಯವರು ಎಲ್ಲಿ ಸಮಸ್ಯೆ ಇದೆ ಎಂದು ಹುಡುಕಾಡಲು ಹರಸಾಹಸಪಟ್ಟಿರುವುದು ಇದೆ.

ಆದ್ದರಿಂದ ಕೂಡಲೇ ವಿದ್ಯುತ್ ಇಲಾಖೆಯವರು ಕಂಬಗಳನ್ನಾದರೂ ಬೇರೆಡೆಗೆ ಸ್ಥಳಾಂತರಿಸಬೇಕು, ಇಲ್ಲ ಅರಣ್ಯ ಇಲಾಖೆಯವರು ಗಿಡಗಳನ್ನು ಬೇರೆಡೆಗೆ ಕೊಂಡೊಯ್ಯಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಸಮಸ್ತ ರೈತರ ಪರವಾಗಿ ಆಗ್ರಹಿಸುತ್ತಿದ್ದೇವೆ. ಕೂಡಲೇ ಎರಡೂ ಇಲಾಖೆಯವರಿಗೆ ಆದೇಶ ಮಾಡಬೇಕೆಂದು ಆಗ್ರಹಿಸಿದರು.

ಈ ವೇಳೆ ಜಿಲ್ಲಾ ಸಂಚಾಲಕ ರಾಮನಗೌಡ ಪಾಟೀಲ(ಬ್ಯಾಲ್ಯಾಳ), ಗೌರವಾಧ್ಯಕ್ಷ ಕಲ್ಲಪ್ಪನಗೌಡ ಪಾರಶೆಟ್ಟಿ, ತಾ.ಉಪಾಧ್ಯಕ್ಷ ಮಹಾದೇವಪ್ಪ ತೇಲಿ, ತಾ.ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಗೋಡೇಕಾರ, ಮುಖಂಡರಾದ ಹೊನಮಲ್ಲ ಸಾರವಾಡ, ರಾಜಕುಮಾರ ಹೊನ್ನಳ್ಳಿ, ಶಿವರಾಜ ಕುಮಟಗಿ ಸೇರಿದಂತೆ ಇತರರು ಇದ್ದರು.

# ಗುಪ್ತೇಶ್ವರಿ ದೇವಿಗೆ ಕಳಸಾರೋಹಣ

ಉದಯರಶ್ಮಿ ನ್ಯೂಸ್

ಝಳಕಿ: ಸಮೀಪದ ಗುಂದವಾನ ಗ್ರಾಮದ ಗ್ರಾಮ ದೇವತೆ ಗುಪ್ತೇಶ್ವರಿ ದೇವಿಗೆ ಕಳಸಾರೋಹಣ ಕಾರ್ಯಕ್ರಮ ಜರುಗಿತು.

ಗ್ರಾಮದ ಮಾ.15 ರಂದು ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಹೂಗಳು ಸುರಿಮಳೆ ಮಾಡುತ್ತ ಗ್ರಾಮಕ್ಕೆ ಶಿಖರದ ಕಳಸಕ್ಕೆ ಸ್ವಾಗತಿಸುವ ಮೂಲಕ ದೇವಿಯ ಗುಡಿಗೆ ಬಂದು ನಂತರ ಶಿಖರಕ್ಕೆ ಕಳಸಾರೋಹಣ ಮಾಡಲಾಯಿತು.

ಸ್ಥಳದಲ್ಲಿ ಜಾತ್ರಾ ಕಮೀಟಿ ಅಧ್ಯಕ್ಷ ಹಣಮಂತ ಖಡೆಖಡೆ, ಸೈಯದ್ ಶಿವಣಗಿ, ಅಕ್ಬರ್ ಖಾನಾಪೂರ, ಮುನ್ನಾಗೌಡ ಪಟೇಲ, ಜಾವೀಧ ಬಿರಾದಾರ, ಆರ್.ಡಿ.ಖಾನಾಪೂರ, ಲಾಲಸಾಬ ಇನಾಮದಾರ,



ನಬೀಸಾಬ ಮುಜಾವರ, ಸೇರಿದಂತೆ ಇತರರು ಇದ್ದರು.

# ಬಸವರಾಜ್ ಗೆ ಯುವರತ್ನ ಪ್ರಶಸ್ತಿ ಪ್ರದಾನ



ಉದಯರಶ್ಮಿ ನ್ಯೂಸ್

ವಿಜಯಪುರ: ಸಮಾಜದ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಜೀ-ಕನ್ನಡ ನ್ಯೂಸ್ 2024ರ ಯುವರತ್ನ ಪ್ರಶಸ್ತಿಯನ್ನು ವಿಜಯಪುರ ಜಿಲ್ಲಾ ಬಾರ್ ಅಸೋಸಿಯೇಷನ್ ಅಧ್ಯಕ್ಷ ಬಸವರಾಜ್ ಮಲ್ಲಪ್ಪ ಜರಾಳಿ ಇವರಿಗೆ ನೀಡಿ ಸನ್ಮಾನಿಸಲಾಯಿತು. ಈ ಕಾರ್ಯಕ್ರಮವು ಬೆಂಗಳೂರಿನ ಹೊಟೇಲ್ ಲಲಿತ್ ಅಶೋಕ್‌ದಲ್ಲಿ ಆಯೋಜಿಸಲಾಗಿತ್ತು.

ಈ ಸಮಯದಲ್ಲಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಕೃಷಿ ಇಲಾಖೆ ಸಚಿವ ಚೆಲುವರಾಯ ಸ್ವಾಮಿ, ಕಾರ್ಮಿಕ ಸಚಿವ ಸಂತೋಷ ಲಾಡ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ತಂಗಡಗಿ, ನಿರ್ಮಾಪಕಿ ಅಶ್ವಿನಿ ಪುನೀತ ರಾಜಕುಮಾರ, ನಟಿ ಆರಾಧನಾ ರಾಮ್, ನಟ ವಿಜಯ ರಾಘವೇಂದ್ರ, ಧ್ರುವ ಸರ್ಜಾ ಉಪಸ್ಥಿತರಿದ್ದು ಸಾಧಕರಿಗೆ ಸನ್ಮಾನಿಸಿದರು.

# ಬಿಜೆಪಿಯಿಂದ ಹಿಂದುಳಿದ ವರ್ಗಕ್ಕೆ ಮೋಸ :ಶಿವಾಜಿ ಮೆಟಗಾರ

ಉದಯರಶ್ಮಿ ನ್ಯೂಸ್



ದೇವರಹಿಪ್ಪರಗಿ: ಬಿಜೆಪಿ ಹಿಂದುಳಿದ ವರ್ಗವನ್ನು ಸದಾ ಕಡೆಗಣಿಸುತ್ತಲೇ ಬಂದಿದ್ದು, ಕೇವಲ ಮತ ಬ್ಯಾಂಕ್ ರಾಜಕಾರಣಕ್ಕಾಗಿ ಬಳಸಿಕೊಂಡು ಬಿಸಾಕುತ್ತಿದೆ. ಲೋಕಸಭಾ ಚುನಾವಣೆಯಲ್ಲಿ ರಾಜ್ಯದ ಎರಡು ಪ್ರಬಲ ಸಮುದಾಯಗಳಿಗೆ ಟಿಕೆಟ್ ನೀಡದೆ ಮೋಸ ಮಾಡಿದೆ ಎಂದು ಕೋಲಿ ಕಬ್ಬಲಿಗ ಯುವವೇದಿಕೆ ರಾಜ್ಯಾಧ್ಯಕ್ಷ ಶಿವಾಜಿ ಮೆಟಗಾರ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಲೋಕಸಭಾ ಚುನಾವಣೆಯಲ್ಲಿ ಹಾವೇರಿಯಿಂದ ಕೆ.ಎಸ್. ಈಶ್ವರಪ್ಪನವರ ಮಗನಿಗೆ ಟಿಕೆಟ್ ನೀಡಲಾಗುವುದೆಂದು ಹೇಳಿ ಮೋಸ ಮಾಡಲಾಯಿತು. ಅದರಂತೆ ಉಡುಪಿ ಚಿಕ್ಕಮಗಳೂರು ಕ್ಷೇತ್ರದಲ್ಲಿ ಪ್ರಮೋದ ಮದ್ವರಾಜ ಅವರಿಗೆ ಟಿಕೆಟ್ ನೀಡದೇ ಹಿಂದುಳಿದ ವರ್ಗವನ್ನು ತುಳಿಯುವ ಕೆಲಸ ಬಿಜೆಪಿ ಮಾಡುತ್ತಿದೆ. ಅಹಿಂದ್ ವರ್ಗವನ್ನು ಕೇವಲ ವ್ಹೋಟ್ ಬ್ಯಾಂಕ ರಾಜಕಾರಣಕ್ಕಾಗಿ ಬಳಸಿಕೊಂಡು ಅಧಿಕಾರ ನೀಡುವಾಗ ಕೇವಲ ಮೇಲ್ವರ್ಗದವರಿಗೆ ನೀಡುತ್ತಿರುವುದು ಹಲವಾರು ನಿದರ್ಶನಗಳಿವೆ.

ರಾಜ್ಯದಲ್ಲಿ ಸುಮಾರು 70ಲಕ್ಷ ಕುರುಬ ಸಮುದಾಯವಿದ್ದು, ಅವರಿಗೂ ಒಂದು ಟಿಕೆಟ್ ಇಲ್ಲದಂತಾಗಿದೆ. ಅದರಂತೆ ಸುಮಾರು 50ಲಕ್ಷದಷ್ಟಿರುವ ಕೋಲಿ ಕಬ್ಬಲಿಗ, ಮೀನುಗಾರರು, ಸೇರಿದಂತೆ 37 ರ್‍ಯಾಯ ಪದಗಳ ಸೇರಿ ಈ ಸಮುದಾಯದವರಿಗೂ ಟಿಕೆಟ್ ವಂಚಿತರನ್ನಾಗಿ ಮಾಡಿದ್ದು, ಬಿಜೆಪಿಯ ಮುಖವಾಡ ಬಯಲಾಗಿದೆ. ಕೆ.ಎಸ್. ಈಶ್ವರಪ್ಪ ಕಟ್ಟಾ ಬಿಜೆಪಿಗರು, ಆದರೆ ಯಡಿಯೂರಪ್ಪನವರಂತ ಕೆಜೆಪಿ ಕಟ್ಟಿ ಪಕ್ಷದ್ರೋಹ ಮಾಡಿದವರಿಗೆ ಮಣೆ ಹಾಕಲಾಗುತ್ತಿದೆ. ಪಕ್ಷ ಸಂಘಟನೆ ಮಾಡಿದವರ ಗತಿಯೇನು? ಎನ್ನುವಂತಾಗಿದೆ. ಇದೇ ರೀತಿ ಕೋಲಿ ಕಬ್ಬಲಿಗ ಸಮುದಾಯದವರಿಗೆ ಎಸ್ಟಿ ಮೀಸಲಾತಿ ನೀಡುತ್ತೇನೆ ಎಂದು ಕಳೆದ ಲೋಕಸಭಾ ಚುನಾವಣೆಯಲ್ಲಿ ಪ್ರಧಾನಿಗಳು ಕಲಬುರಗಿಯಲ್ಲಿ ಆಶ್ವಾಸನೆ ನೀಡಿದ್ದರು. ಐದು ವರ್ಷಗಳಾದರೂ ನಮಗೆ ಅಚ್ಛೇ ದಿನ್ ಬಂದಿಲ್ಲ. ಅದಕ್ಕಾಗಿ ಈ ಸಲದ ಲೋಕಸಭಾ ಚುನಾವಣೆಯಲ್ಲಿ ಹಿಂದುಳಿದವರು ಅದರಲ್ಲಿ ವಿಶೇಷವಾಗಿ ಕೋಲಿ ಕಬ್ಬಲಿಗ ಹಾಗೂ ಕುರುಬ ಸಮುದಾಯದವರು ಬಿಜೆಪಿಯನ್ನು ಬೆಂಬಲಿಸುವುದರ ಕುರಿತು ವಿಚಾರ ಮಾಡಲಾಗುತ್ತಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR